ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೯

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ : ೨೫ನೇ ಸೆಪ್ಟೆಂಬರ್, ೨೦೨೦

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

೪. ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೬. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

---

## ಅಂಗನವಾಡಿ ಮಕ್ಕಳಿಗೆ ನೀಡುತ್ತಿರುವ ಅಪೌಷ್ಠಿಕ ಆಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೧ (೮೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ M.S.N.P.C ಘಟಕಗಳು ಅಂಗನವಾಡಿ ಮಕ್ಕಳಿಗೆ ಅಪೌಷ್ಠಿಕ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ M.S.N.P.C ಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳಪೆ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡುತ್ತಿರುವ M.S.N.P.C ಗಳ ಬಗ್ಗೆ ಸರ್ಕಾರ ತನಿಖೆ ನಡೆಸುವುದೇ ; ನಡೆಸದಿದ್ದರೆ, ತನಿಖೆ ನಡೆಸುವುದು ಯಾವಾಗ ;

(ಇ) ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೃದ್ಧಾಶ್ರಮ, ಅಂಗವಿಕಲರ ಕೇಂದ್ರ ಹಾಗೂ ಸ್ಪಂದನಾ ಸಂಸ್ಥೆಗಳು ಎಷ್ಟು ; ಯಾವ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿವೆ ? (ವಿಧಾನಸಭಾ ಕ್ಷೇತ್ರವಾರು ವಿವರವನ್ನು ನೀಡುವುದು)

## ಬೀದರ್ ಜಿಲ್ಲೆಯ ಕುಡಿಯುವ ನೀರಿನ ಘಟಕದ ಅವ್ಯವಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೨ (೬೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಘಟಕ ಸ್ಥಾಪಿಸುವಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸದನ ಸಮಿತಿಯೊಂದು ರಚಿಸಿ ತನಿಖೆ ನಡೆಸಲಾಗುವುದೆಂದು ಸರ್ಕಾರ ಹೇಳಿರುವುದು ನಿಜವೇ ;

(ಆ) ಸದನ ಸಮಿತಿ ರಚನೆಯಾಗಿದ್ದಲ್ಲಿ, ಸಮಿತಿಯಲ್ಲಿ ಯಾವ ಯಾವ ಸದಸ್ಯರಿದ್ದಾರೆ ; (ವಿವರ ನೀಡುವುದು)

(ಇ) ಸದನ ಸಮಿತಿ ರಚನೆಯಾಗಿದ್ದಲ್ಲಿ ತನಿಖೆ ಪ್ರಾರಂಭವಾಗಿದೆಯೇ ; ಇಲ್ಲವಾದಲ್ಲಿ, ತನಿಖೆ ಯಾವ ಹಂತದಲ್ಲಿದೆ ?

## ಬೀದರ್ ಜಿಲ್ಲೆಯಲ್ಲಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ಮಂಡಳಿಯಿಂದ ನೀಡಿದ ಸಾಲದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೩ (೮೧೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ ; (ಕ್ಷೇತ್ರವಾರು, ಬ್ಯಾಂಕ್‌ವಾರು ವಿವರ ನೀಡುವುದು)

(ಆ) ಈ ಸಾಲಿನಲ್ಲಿ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಯಾವ ಉದ್ದೇಶಕ್ಕಾಗಿ ಪಡೆಯಲಾಗಿತ್ತೋ ಅದಕ್ಕೆ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವ ಬಗ್ಗೆ ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗುತ್ತದೆಯೇ ; ತನಿಖೆ ನಡೆಸುವುದಾದರೆ ಯಾವಾಗ ?

## ಬೀದರ್ ಜಿಲ್ಲೆಗೆ ಹೊಸ ಬಸ್ ಖರೀದಿಸುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೪ (೬೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇನ್ನೂ ಹಳೆಯ ಬಸ್ಸುಗಳು ಚಾಲ್ತಿಯಲ್ಲಿದ್ದು, ಪದೇ ಪದೇ ಕೆಟ್ಟು ಹೋಗುತ್ತಿರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆ ಬೀದರ್‌ಗೆ ಹೊಸ ಬಸ್‌ಗಳನ್ನು ಖರೀದಿಸುವ ಯೋಜನೆ ಏನಾದರೂ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಹೊಸ ಬಸ್ಸುಗಳನ್ನು ಯಾವಾಗ ಖರೀದಿ ಮಾಡಲಾಗುವುದು ?

## ರಾಜ್ಯದಲ್ಲಿ ಕೇಂದ್ರಗಳವಾರು ನೋಂದಣಿಯಾದ ವಾಹನಗಳ ವಿವರ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೫ (೭೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಆರ್‌ಟಿಓ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ವಿವರ ನೀಡುವುದು)

(ಆ) ಕಳೆದ ಸಾಲಿನಲ್ಲಿ ಆರ್‌ಟಿಓ ಕೇಂದ್ರಗಳಿಂದ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಸಂದಾಯವಾಗಿರುವ ಮೊತ್ತವೆಷ್ಟು; (ಮಾಹಿತಿ ನೀಡುವುದು)

(ಇ) ಕಳೆದ ಸಾಲಿನಲ್ಲಿ ನೋಂದಣಿಯಾಗಿರುವ ವಿವಿಧ ಮಾದರಿಯ ವಾಹನಗಳ ನೋಂದಣಿಯಿಂದ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ?

## ಮಂಡ್ಯ ಜಿಲ್ಲೆಯ ರೈತರಿಗೆ ಪಶುಸಂಗೋಪನೆ ಇಲಾಖೆಯಿಂದ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೬ (೮೦೮) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶು ಸಂಗೋಪನಾ ಇಲಾಖೆ ವತಿಯಿಂದ ರೈತರಿಗೆ ದೊರೆಯುತ್ತಿರುವ ಸೌಲಭ್ಯಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಪಶು ಸಂಗೋಪನಾ ಇಲಾಖಾವತಿಯಿಂದ ಮಂಡ್ಯ ಜಿಲ್ಲಾ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಆರ್ಥಿಕವಾಗಿ ಮತ್ತು ಭೌತಿಕವಾಗಿ ವಿವಿಧ ಯೋಜನೆಗಳಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; (ತಾಲ್ಲೂಕುವಾರು ಫಲಾನುಭವಿಗಳ ವಿವರವಾದ ಮಾಹಿತಿ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈವರೆಗೆ ಯಾವ ಯಾವ ಯೋಜನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ ; ಈ ಸಂಬಂಧ ಜಿಲ್ಲಾ ಮತ್ತು ತಾಲ್ಲೂಕುವಾರು ಅನುದಾನದ ಅಂದಾಜು ಮೊತ್ತ ಮತ್ತು ಗುರಿಯೇನು ? (ವಿವರ ನೀಡುವುದು)

# ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೭ (೮೦೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ವಾರ್ತಾ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಸೋದ್ಯಮ ಇಲಾಖೆ ಅಡಿಯಲ್ಲಿ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಗೆ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ಕಾಮಗಾರಿಗಳಾವುವು ; (ತಾಲ್ಲೂಕುವಾರು, ಕಾಮಗಾರಿವಾರು, ವಿವರವಾದ ಮಾಹಿತಿ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಸಾಲುಗಳಲ್ಲಿ ಮಂಜೂರಾದ ಕಾಮಗಾರಿಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು ; ಸದರಿ ಕಾಮಗಾರಿಗಳಿಗೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದರೂ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಉಳಿಕೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೮ (೮೦೬) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪ ಸಂಖ್ಯಾತರ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಇಲಾಖೆ ವತಿಯಿಂದ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಅಲ್ಪ ಸಂಖ್ಯಾತರಿಗೆ ಆರ್ಥಿಕವಾಗಿ ಮತ್ತು ಭೌತಿಕವಾಗಿ ವಿವಿಧ ಯೋಜನೆಗಳಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈವರೆಗೆ ಯಾವ ಯಾವ ಯೋಜನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ ; ಈ ಸಂಬಂಧ ಜಿಲ್ಲಾ ಮತ್ತು ತಾಲ್ಲೂಕುವಾರು ಮಂಜೂರಾಗಿರುವ ಅನುದಾನದ ಅಂದಾಜು ಮೊತ್ತ ಮತ್ತು ಗುರಿ ಏನು ? (ವಿವರ ನೀಡುವುದು)

## ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೊರೋನಾ–೧೯ ರೋಗದಿಂದ ಚೇತರಿಕೆಗೆ ತೆಗೆದುಕೊಂಡ ಕ್ರಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೯ (೮೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊರೋನಾ–೧೯ ರಿಂದ ಸಾರಿಗೆ ಇಲಾಖೆಯಲ್ಲಿ ಉದ್ಭವಿಸಿರುವ ಸಮಸ್ಯೆಗಳಾವುವು ; ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ

ತೆಗೆದುಕೊಂಡಿರುವ ಕ್ರಮಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೊರೋನಾ–೧೯ ರಿಂದ ಜೀವ ರಕ್ಷಿಸಿಕೊಳ್ಳಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ; ಈ ಸಂಬಂಧ ಸರ್ಕಾರ ಎಷ್ಟು ಮೊತ್ತವನ್ನು ಖರ್ಚು ಮಾಡಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಬಸ್ಸುಗಳಲ್ಲಿ ಸಾಮಾಜಿಕ ಅಂತರ ಕಾಪಾಡುವ ಸಂಬಂಧ ಇಲಾಖೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಬಸ್ಸಿನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಯನ್ನು ಕಡಿತಗೊಳಿಸಲಾಗಿದೆಯೇ ; ಇದರಿಂದ ಇಲಾಖೆಗೆ ಆಗಿರುವ ಲಾಭ ಮತ್ತು ನಷ್ಟವೇನು ; ಇದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಈ) ಕೊರೋನಾ–೧೯ ರಿಂದ ಸಾರಿಗೆ ಇಲಾಖೆಗೆ ಆದ ನಷ್ಟವೆಷ್ಟು; (ನಿಗಮವಾರು ಮಾಹಿತಿ ನೀಡುವುದು)

(ಉ) ಇದನ್ನು ಯಾವ ರೀತಿ ಸರಿದೂಗಿಸಲಾಗುವುದು ?

## ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಠಾಣಾ ವ್ಯಾಪ್ತಿ ವಿಸ್ತರಣೆ ಹಕ್ಕುಪತ್ರ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೦ (೮೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ "ಗ್ರಾಮಠಾಣಾ" ವನ್ನು ಈ ಹಿಂದೆ ಸುಮಾರು ೬೦-೭೦ ವರ್ಷಗಳ ಹಿಂದೆ ಗುರುತಿಸಲ್ಪಟ್ಟಿದ್ದು ಪ್ರಸ್ತುತದಲ್ಲಿ ಗ್ರಾಮಠಾಣಾ ವಿಸ್ತರಣೆಯಾಗಿದ್ದು ವಿಸ್ತಾರವಾದ ಸ್ಥಳವು ಕೃಷಿ ಭೂಮಿ / ಭೂ ಪರಿವರ್ತಿತ ಭೂಮಿ / ಸರ್ಕಾರಿ ಜಮೀನು ಎಂದು ಗುರುತಿಸಲ್ಪಟ್ಟಿದೆಯೇ ; (ಮಾಹಿತಿ ನೀಡುವುದು)

(ಆ) ಕಂದಾಯ ಗ್ರಾಮಕ್ಕೆ ಹೊಂದಿಕೊಂಡಿರುವಂತೆ ದಾಖಲೆ ಗ್ರಾಮಗಳು ಸುಮಾರು ೦.೫ ಕಿ.ಮೀ ನಿಂದ ೨.೦ ಕಿ.ಮೀ ವರೆಗೆ ಕೊಪ್ಪಲು, ಪಾಳ್ಯಗಳು, ಇದ್ದು ಸದರಿ ಗ್ರಾಮಗಳಲ್ಲಿ ವಾಸವಿರುವ ಕುಟುಂಬಗಳಿಗೆ ಗ್ರಾಮಠಾಣಕ್ಕೆ ಒಳಪಡದಿರುವುದರಿಂದ ಗ್ರಾಮ ಪಂಚಾಯಿತಿಯಿಂದ ನೀಡುವ ಯಾವುದೇ ಸೌಲಭ್ಯಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಉದಾ: ವಸತಿ ಯೋಜನೆ, ವಿದ್ಯುತ್, ಇತರೆ ಮೂಲಭೂತ ಸೌಲಭ್ಯಗಳು ದೊರೆಯದೆ ಇರುವುದು)

(ಇ) ಪ್ರಸ್ತುತ ಸರ್ಕಾರಿ ಜಮೀನುಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಂಡಿರುವವರಿಗೆ ಸಕ್ರಮ ಮಾಡಲು ಗ್ರಾಮ ಮಟ್ಟದಲ್ಲಿ ೯೪ ಸಿ ಹಾಗೂ ಪಟ್ಟಣ ವ್ಯಾಪ್ತಿಯಲ್ಲಿ ೯೪ ಸಿಸಿ ಜಾರಿಗೆ ತಂದಿದ್ದರೂ ಸಹ ಈವರೆಗೂ ಯಾವುದೇ ಹಕ್ಕು ಪ್ರಮಾಣ ಪತ್ರ ನೀಡದಿರುವುದರಿಂದ ಗ್ರಾಮಠಾಣಾ ವಿಸ್ತರಣೆ ಮಾಡಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರದ ನಿಲುವೇನು ? (ವಿವರವಾದ ಮಾಹಿತಿ ನೀಡುವುದು)

## ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೬೦೧ (೬೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್–ಬಿ ಹುದ್ದೆಗೆ ಮೇಲ್ದರ್ಜೆಗೇರಿಸುವುದು ಮತ್ತು ೨ ಹೆಚ್ಚುವರಿ ಸಹಾಯಕ ನಿರ್ದೇಶಕ ಹುದ್ದೆಗಳನ್ನು ಸೃಜಿಸುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಪ್ರಸ್ತಾವನೆಗೆ ಅನುಮೋದನೆ ನೀಡಿಲ್ಲವೇಕೆ ಮತ್ತು ಪ್ರಸ್ತಾವನೆಗೆ ಯಾವಾಗ ಅನುಮೋದನೆ ನೀಡಲಾಗುವುದು ;

(ಇ) ರಾಜ್ಯ ಸ್ಥಳೀಯ ಸಂಸ್ಥೆಗಳನ್ನು ಬಲಿಷ್ಠ ಸ್ಥಳೀಯ ಸಂಸ್ಥೆಗಳನ್ನಾಗಿ ಮಾಡಲು ಕ್ರಮ ಕೈಗೊಂಡಿಲ್ಲವೇಕೆ ?

## ಸ್ವಚ್ಛ ಭಾರತ ಅಭಿಯಾನ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೦೨ (೭೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ವಚ್ಛ ಭಾರತ ಅಭಿಯಾನದಡಿಯಲ್ಲಿ ನಿರ್ಮಿಸಲಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಅಭಿಯಾನದಡಿಯಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಎಷ್ಟು ಅನುದಾನ ನೀಡಲಾಗಿದೆ ; ಅದನ್ನು ಯಾವ ರೀತಿ ವೆಚ್ಚ ಮಾಡಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಜಿಲ್ಲೆಗಳನ್ನು ಬಯಲು ಶೌಚಾಲಯ ಮುಕ್ತ ಜಿಲ್ಲೆಗಳೆಂದು ಗುರುತಿಸಲಾಗಿದೆ ?

## ರಂಗಮಂದಿರ ಮತ್ತು ಸಾಂಸ್ಕೃತಿಕ ಭವನ ನಿರ್ಮಾಣ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೩ (೭೮೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಕಳೆದ ೩ ವರ್ಷಗಳಿಂದ ವಿವಿಧ ಯೋಜನೆಗಳಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಇದರಲ್ಲಿ ಖರ್ಚಾಗಿರುವುದೆಷ್ಟು ; ಖರ್ಚಾಗದೆ ಉಳಿದಿರುವುದೆಷ್ಟು ;

(ಆ) ಇಲಾಖೆಯಿಂದ ರಾಜ್ಯದಲ್ಲಿ ಎಷ್ಟು ರಂಗಮಂದಿರ ಮತ್ತು ಸಂಸ್ಕೃತಿ ಭವನಗಳನ್ನು ನಿರ್ಮಾಣ ಮಾಡಲಾಗಿದೆ ; ಕಳೆದ ೩ ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಪ್ರಸ್ತುತ ಸಾಲಿನಲ್ಲಿ ಎಷ್ಟು ಇಂಥ ಕಟ್ಟಡಗಳನ್ನು ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ?

## ಅಂಧ ವಿದ್ಯಾರ್ಥಿಗಳಿಗೆ ಸ್ವಾವಲಂಭಿಯಾಗಲು ಕಿಟ್ ವಿತರಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೪ (೭೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ನೇ ಸಾಲಿನ ಆಯವ್ಯಯದಲ್ಲಿ ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಭಿಗಳಾಗಲು ರಾಜ್ಯದ ೫೦೦ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್ ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನಗಳನ್ನು ಒಳಗೊಂಡ ತಲಾ ೨೫.೦೦೦ ರೂಪಾಯಿಗಳ ಕಿಟ್‌ಗಳನ್ನು ವಿತರಿಸಲಾಗುವುದೆಂದು ಘೋಷಣೆ ಮಾಡಿದ್ದು, ಇದು ಅನುಷ್ಠಾನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ವಿತರಿಸಲಾಗಿದೆ ;

(ಇ) ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು ?

## ಸಾರಿಗೆ ಸಂಸ್ಥೆ ಬಸ್ ಪ್ರಯಾಣ ದರ ಏರಿಕೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೫ (೭೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡೀಸಲ್ ಬೆಲೆ ಏರಿಕೆಯ ಹಿನ್ನೆಲೆಯಲ್ಲಿ ಸಾರಿಗೆ ಸಂಸ್ಥೆ ಪ್ರಯಾಣ ದರವನ್ನು ಏರಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಶೇಕಡ ಎಷ್ಟು ಹೆಚ್ಚು ಮಾಡಲಾಗಿದೆ;

(ಆ) ಸಾರಿಗೆ ಸಂಸ್ಥೆಯ ಟಿಕೆಟ್ ದರವನ್ನು ಹೆಚ್ಚಿಸಲು ಯಾವ ಮಾನದಂಡವನ್ನು ಅನುಸರಿಸಲಾಗುವುದು; ಯಾವ ರೀತಿ ಟಿಕೆಟ್ ದರ ನಿಗಧಿಗೊಳಿಸಲಾಗುವುದು;

(ಇ) ಟಿಕೆಟ್ ದರವನ್ನು ಹೆಚ್ಚಿಸುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುವುದಿಲ್ಲವೇ; ಸೋರಿಕೆ ಮತ್ತು ಅನಾವಶ್ಯಕ ವೆಚ್ಚಗಳನ್ನು ತಡೆಗಟ್ಟಿ ನಷ್ಟವನ್ನು ಸರಿದೂಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ?

## "ಜೀವನ ಚೈತ್ರ ಯಾತ್ರೆ" ಕಾರ್ಯಕ್ರಮದ ಜಾರಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೬ (೭೬೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹಾಗೂ ರೈಲ್ವೆ ಇಲಾಖೆಯ (IRCTC) ಸಹಯೋಗದೊಂದಿಗೆ ರಾಜ್ಯದಲ್ಲಿರುವ ೬೦ ವರ್ಷ ಮೀರಿದ ಬಡತನ ರೇಖೆಗಿಂತ ಕೆಳಗಿರುವ ಆಯ್ದ ಫಲಾನುಭವಿಗಳಿಗೆ ಉಚಿತವಾಗಿ ರಾಜ್ಯ ಮತ್ತು ದೇಶದ ಪ್ರಸಿದ್ಧ ತೀರ್ಥ ಕ್ಷೇತ್ರಗಳನ್ನು ದರ್ಶಿಸಲು "ಜೀವನ ಚೈತ್ರ ಯಾತ್ರೆ" ಯನ್ನು ಜಾರಿಗೊಳಿಸಲಾಗಿದೆಯೇ;

(ಆ) ಜಾರಿಗೊಳಿಸಿದ್ದಲ್ಲಿ, ಎಷ್ಟು ಜನ ಫಲಾನುಭವಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಜಾರಿಗೊಳಿಸದಿದ್ದಲ್ಲಿ, ಕಾರಣಗಳೇನು ಮತ್ತು ಯಾವಾಗ ಜಾರಿಗೊಳಿಸಲಾಗುವುದು ?

## ನಾಡಪ್ರಭು ಕೆಂಪೇಗೌಡರ ೫೦೦ ವರ್ಷದ ಕೋಟೆ ಶಿಥಿಲಗೊಂಡಿರುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):–**

೬೦೭ (೭೪೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಡಪ್ರಭು ಕೆಂಪೇಗೌಡರು ಮಾಗಡಿಯಲ್ಲಿ ೫೦೦ ವರ್ಷಗಳ ಹಿಂದೆ ಕೋಟೆ ನಿರ್ಮಿಸಿದ್ದು, ಕೋಟೆಯು ಶಿಥಿಲಾವಸ್ಥೆಗೊಂಡಿರುವುದರಿಂದ ಈ ಕೋಟೆಗೆ ಪುರಾತತ್ವ ಇಲಾಖೆಯಿಂದ ಜೀರ್ಣೋದ್ಧಾರಕ್ಕಾಗಿ ನಿಗಧಿಯಾಗಿರುವ ಅನುದಾನ ಎಷ್ಟು; ಜೀರ್ಣೋದ್ಧಾರಕ್ಕಾಗಿ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಆ) ಕೋಟೆ ಜೀರ್ಣೋದ್ಧಾರಕ್ಕಾಗಿ ಈವರೆಗೂ ಎಷ್ಟು ಅನುದಾನ ವೆಚ್ಚವಾಗಿದೆ; ಉಳಿಕೆ ಅನುದಾನ ಎಷ್ಟು;

(ಇ) ಕೋಟೆಯ ಜೀರ್ಣೋದ್ಧಾರ ಅರ್ಧದಲ್ಲೇ ನಿಂತಿದ್ದು, ಕಾಮಗಾರಿ ಸ್ಥಗಿತಗೊಳಿಸಿರಲು ಕಾರಣವೇನು; ಕೋಟೆಯ ಜೀರ್ಣೋದ್ಧಾರ

ಪೂರ್ಣಗೊಳಿಸಲು ಇನ್ನೂ ಎಷ್ಟು ಸಮಯಾವಕಾಶ ಬೇಕು ? (ಸಂಪೂರ್ಣ ಮಾಹಿತಿ ನೀಡುವುದು)

## ಎಂ. ಶೆಟ್ಟಿಹಳ್ಳಿ ಗ್ರಾಮಕ್ಕೆ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):-**

೬೦೮ (೮೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ಪಾಂಡವಪುರ, ತಾಲ್ಲೂಕು, ಮೇಲುಕೋಟೆ ಹೋಬಳಿಯ ಎಂ. ಶೆಟ್ಟಿಹಳ್ಳಿ ಗ್ರಾಮದಲ್ಲಿ ಕಳೆದ ೫ ವರ್ಷಗಳಿಂದ ಗ್ರಾಮ ಪಂಚಾಯಿತಿ ಯೋಜನೆಯಡಿಯಲ್ಲಿ ಎಷ್ಟು ಅಭಿವೃದ್ಧಿ ಕಾರ್ಯಗಳಾಗಿವೆ; ಅಭಿವೃದ್ಧಿ ಕಾರ್ಯದಲ್ಲಿ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

(ಆ) ಎಂ. ಶೆಟ್ಟಿಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲಿ, ಯಾವಾಗ ರಸ್ತೆ ಅಭಿವೃದ್ಧಿ ಕಾರ್ಯವನ್ನು ಪ್ರಾರಂಭಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಎಂ. ಶೆಟ್ಟಿಹಳ್ಳಿ ಗ್ರಾಮದಲ್ಲಿ ಅದೇ ಗ್ರಾಮದ ಗ್ರಾಮ ಪಂಚಾಯತ್ ಸದಸ್ಯರು ಕೆಲವು ಜನರ ಜೊತೆ ಸೇರಿಕೊಂಡು ರಸ್ತೆ ಅಗಲೀಕರಣಕ್ಕೆಂದು ರೈತರೊಬ್ಬರ ಮನೆಯನ್ನು ಕೆಡವಿ ಮನೆಯವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೫ ವರ್ಷಗಳಿಂದ ಎಂ. ಶೆಟ್ಟಿಹಳ್ಳಿ ಗ್ರಾಮ ಪಂಚಾಯತ್ ಯೋಜನೆಯಡಿ ಯಾವ ಯಾವ ಕಾರ್ಯಗಳು ಅಭಿವೃದ್ಧಿಯಾಗಿದೆ; ಎಷ್ಟು ಹಣ ಬಳಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) ಹಣ ದುರುಪಯೋಗವಾಗಿದ್ದಲ್ಲಿ, ಯಾವ ಕ್ರಮಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಮೋಹಳ್ಳಿಯಿಂದ ವಿಧಾನ ಸೌಧ ಬಸ್ ನಂ. ೨೨೭/ಗಿ ಹಾಗೂ ೨೨೬/ಗಿ ಎನ್–ಗಿಗಿ ನಿಲ್ಲಿಸುತ್ತಿರುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):–**

೬೦೯ (೭೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಕೆಂಗೇರಿ ಮಾರ್ಗವಾಗಿ ಬಸ್ ನಂ. ೨೨೭/ಗಿ ಟೌನ್ ಹಾಲ್ ಮುಖಾಂತರ ವಿಧಾನ ಸೌಧ, ಹೈಕೋರ್ಟ್ ಹಾಗೂ ಈ ಭಾಗದಲ್ಲಿರುವ ಹಲವಾರು ಇಲಾಖೆಗಳ ಸರ್ಕಾರಿ ನೌಕರರುಗಳಿಗೆ ಸಮಯಕ್ಕೆ ಸರಿಯಾಗಿ ಕಛೇರಿಗೆ ಹಾಜರಾಗಲು ಉಪಯೋಗವಾಗುತ್ತಿದ್ದು, ರಾಮೋಹಳ್ಳಿಗೆ ಹೋಗುತ್ತಿದ್ದ ಬಸ್‌ನ್ನು ಏಕಾಏಕಿ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ, ಬದಲಿ ವ್ಯವಸ್ಥೆ ಮಾಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ)

(ಆ) ಈ ಮಾರ್ಗದಲ್ಲಿ ಓಡಾಡುವ ಬಸ್‌ಗಳನ್ನು ನಿಲ್ಲಿಸಿರುವುದರಿಂದ ನೌಕರರುಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಮತ್ತೆ ಈ ಮಾರ್ಗದಲ್ಲಿ ಮೇಲ್ಕಂಡ ಬಸ್ ಗಳನ್ನು ಪುನರಾರಂಭ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆಯೇ; ಕೈಗೊಳ್ಳದಿದ್ದಲ್ಲಿ ಕಾರಣವೇನು;

(ಇ) ಈ ಬಸ್‌ಗಳನ್ನು ಡಿಪೋ ೩೭ ಕ್ಕೆ ಬದಲಾವಣೆ ಮಾಡುವುದರಿಂದ ಸಾರ್ವಜನಿಕರಿಗೆ ಹಾಗೂ ಸರ್ಕಾರಿ ನೌಕರರುಗಳಿಗೆ ತುಂಬಾ ಅನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬದಲಾವಣೆ ಮಾಡಲು ಸಂಸ್ಥೆಯು ಚಿಂತಿಸಿದೆಯೇ ?

## ನರೇಗಾ ಯೋಜನೆ ಕುರಿತು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):–**

೬೧೦ (೧೧೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರೇಗಾ ಯೋಜನೆ ಕಾಮಗಾರಿಗಳನ್ನು ಕೆಲವು ಮಾಜಿ ಸದಸ್ಯರು ಹಾಗೂ ಅಧ್ಯಕ್ಷರು ಮಾನವ ಶ್ರಮಕ್ಕೆ ಬದಲಾಗಿ ತಾವೇ ಯಂತ್ರಗಳ ಹಾಗೂ ಗುತ್ತಿಗೆ ಮೇಲೆ ನಿರ್ವಹಿಸಿ ರೈತರ ಬ್ಯಾಂಕ್ ಖಾತೆಗಳಿಗೆ ಹಣ ಹಾಕಿಸಿ ನಂತರ ಅದನ್ನು ಅವರ ಮೂಲಕ ತಾವೇ ಪಡೆದುಕೊಂಡು ಕೋಟ್ಯಾಂತರ ರೂಪಾಯಿ ವಂಚಿಸಿದ್ದು, ಈ ಬಗ್ಗೆ ಇಲಾಖೆ ಉನ್ನತಾಧಿಕಾರಿಗಳಿಂದ ತನಿಖೆ ಮಾಡಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ;

(ಆ) ಇನ್ನು ಮುಂದೆ ಈ ರೀತಿ ಯೋಜನೆ ಮೂಲ ಉದ್ದೇಶವನ್ನು ಬುಡಮೇಲು ಮಾಡಿ ಯಂತ್ರಗಳಿಂದ ಮಾಜಿ ಸದಸ್ಯರೇ ಕೆಲಸ ಮಾಡಿಸಿ ಸರ್ಕಾರದ ನೀತಿ ನಿಯಮಗಳನ್ನೇ ಬುಡಮೇಲು ಮಾಡಿ ವಂಚಿಸಿ, ಕೋಟ್ಯಾಂತರ ರೂ. ಗಳು ಹಾಳು, ನಷ್ಟ ಮಾಡುತ್ತಿರುವುದನ್ನು ತಡೆಯಲು ಸರ್ಕಾರ ಕೂಡಲೇ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯದಲ್ಲಿ ಮೋಡ ಬಿತ್ತನೆ ಹಾಗೂ ಫಲಶೃತಿ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೧೧ (೭೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಳೆಯ ಪ್ರಮಾಣ ಹೆಚ್ಚಿಸಲು ಯಾವ ಯಾವ ಭಾಗಗಳಲ್ಲಿ ಮೋಡ ಬಿತ್ತನೆ ಕಾರ್ಯಕ್ರಮವನ್ನು ನಡೆಸಲಾಗಿದೆ;

(ಆ) ಇದುವರೆವಿಗೆ ನಡೆಸಲಾಗಿರುವ ಮೋಡ ಬಿತ್ತನೆ ಕಾರ್ಯಕ್ರಮ ಫಲಶೃತಿ ಏನು; ವಿನಿಯೋಗಿಸಲಾದ ಅನುದಾನ ಎಷ್ಟು; ಯಾವ ಸಂಸ್ಥೆ, ವ್ಯಕ್ತಿಗಳು ಈ ಕಾರ್ಯಕ್ರಮದ ಜವಾಬ್ದಾರಿ ವಹಿಸಿದ್ದಾರೆ ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿನ ಮಗ್ಗಗಳು ಮತ್ತು ನೇಕಾರರ ಸಮಸ್ಯೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೧೨ (೭೩೨) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ಸಂಖ್ಯೆ ಎಷ್ಟು; (ಪ್ರದೇಶವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಜವಳಿ ಉದ್ಯಮದಲ್ಲಿ ತೊಡಗಿಸಿಕೊಂಡಿರುವ ನೇಕಾರರ ಅಂದಾಜು ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ನೇಕಾರರ ಸಮಸ್ಯೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು? (ಯೋಜನೆವಾರು

ಕಳೆದ ಮೂರು ವರ್ಷಗಳ ಅವಧಿಯಲ್ಲಿ ಒದಗಿಸಿದ ಅನುದಾನ ಮತ್ತು ವಿನಿಯೋಗಿಸಲಾದ ಅನುದಾನ ಕುರಿತ ಪ್ರತ್ಯೇಕ ಮಾಹಿತಿ ಒದಗಿಸುವುದು)

## ಫ್ಯಾನ್ಸಿ ನೋಂದಣಿ ಸಂಖ್ಯೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆ ಕ್ಷೇತ್ರದಿಂದ ಚುನಾಯಿತರಾದವರು):–**

೬೧೩ (೭೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೋಂದಣಿಯಾಗುವ ವಿವಿಧ ವಾಹನಗಳಿಗೆ ವಾಹನಗಳ ಮಾಲೀಕರು ನಿರ್ದಿಷ್ಟ ಸಂಖ್ಯೆ (fancy number) ಪಡೆಯಲು ಅವಕಾಶವಿದೆಯೇ; ಹಾಗಿದ್ದಲ್ಲಿ, ನಿಯಮಾವಳಿಯ ಮಾಹಿತಿ ಒದಗಿಸುವುದು;

(ಆ) ಫ್ಯಾನ್ಸಿ ನೋಂದಣಿ ಸಂಖ್ಯೆಗಳನ್ನು ಇಲಾಖೆಯ ಹರಾಜು ಮಾಡುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಫ್ಯಾನ್ಸಿ ಸಂಖ್ಯೆಗಳ ಹರಾಜಿನಿಂದ ಸಂಗ್ರಹವಾಗಿರುವ ಹಣವೆಷ್ಟು; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಫ್ಯಾನ್ಸಿ ನೋಂದಣಿ ಸಂಖ್ಯೆಗಳನ್ನು ಪಡೆಯಲು ವಾಹನ ಮಾಲೀಕರು ಮತ್ತು ಅಧಿಕಾರಿಗಳು ಶಾಮೀಲಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇದುವರೆವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಾರವಾರ ಜಿಲ್ಲೆಯಲ್ಲಿ ಪಿ.ಎಮ್.ಜಿ.ಎಸ್.ವೈ ಯೋಜನೆಯಡಿಯ ಕಾಮಗಾರಿ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ  (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೪ (೭೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಾರಾವಾರ ಜಿಲ್ಲೆಯಲ್ಲಿ ; "ನಮ್ಮ ಗ್ರಾಮ ನಮ್ಮ ರಸ್ತೆ" ಹಾಗೂ ಪಿ.ಎಮ್.ಜಿ.ಎಸ್.ವೈ ಯೋಜನೆಯಡಿಯಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ; (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಹಾಗೂ ಕಾಮಗಾರಿಯ ಘೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗೆ ಮೀಸಲಿಟ್ಟ, ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು;

(ಇ) ಈ ಯೋಜನೆಯಡಿಯಲ್ಲಿ ಗ್ರಾಮೀಣ ರಸ್ತೆಗಳನ್ನು ಆಯ್ಕೆ ಮಾಡುವಾಗ ಅನುಸರಿಸಲಾಗುವ ನಿಯಮಗಳಾವುವು; (ನಿಯಮಗಳ ಆದೇಶದ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ಮಂಜೂರಾದ ಹಣದಲ್ಲಿ ಬಹಳಷ್ಟು ಕಾಮಗಾರಿಯಲ್ಲಿ ಅವ್ಯವಹಾರ ಆಗಿದ್ದು, ಅಂತಹವರ ಮೇಲೆ ತನಿಖೆ ಮಾಡಿ ಸೂಕ್ತ ಕ್ರಮ ತೆಗೆದುಕೊಳ್ಳುವುದೇ; ಹಾಗಿದ್ದಲ್ಲಿ, ಎಷ್ಟು ದಿನದಲ್ಲಿ ತನಿಖೆ ಮಾಡಿ ಕ್ರಮ ಕೈಗೊಳ್ಳಲಾಗುವುದು ?

## ಕಳಪೆ ಆಹಾರ ಪೂರೈಕೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೫ (೭೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರಾವಾರ ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರದಲ್ಲಿ ಹುಳಬಿದ್ದ ರಾಗಿ ಹಿಟ್ಟು ಹಾಗೂ ಹೆಸರುಕಾಳುಗಳನ್ನು ಮಕ್ಕಳಿಗೆ ಪೂರೈಸುತ್ತಿದ್ದು, ಇದರಿಂದ ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದು, ಈ ರೀತಿ ತೀರಾ ಕಳಪೆ ಮಟ್ಟದ ಆಹಾರ ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಈ ಸಂಬಂಧ ಅಧಿಕಾರಿಗಳು ಆಕ್ಷೇಪಣೆ ಮಾಡದೇ ಇರುವ ಕುರಿತು ಸರ್ಕಾರ ತನಿಖೆ ಮಾಡುವುದೇ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿರುವ ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರ ವಿವರಗಳನ್ನು ತಾಲ್ಲೂಕುವಾರು ನೀಡುವುದು;

(ಈ) ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಆಹಾರ ಖರೀದಿಸುತ್ತಿರುವ ಆಹಾರ ಸಾಮಾಗ್ರಿಗಳ ಬೆಲೆಗೂ ಹಾಗೂ ಅಂದಿನ ಎ.ಪಿ.ಎಂ.ಸಿ. ಮಾರುಕಟ್ಟೆ ಬೆಲೆಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಮಾರುಕಟ್ಟೆ ಜಿಲ್ಲೆಗಿಂತ ಕಡಿಮೆ ದರದಲ್ಲಿ ಕಳಪೆ ಆಹಾರ ಸಾಮಗ್ರಿಗಳನ್ನು ಖರೀದಿಸಿ ಪೂರೈಸುತ್ತಿರುವುದರ ಬಗ್ಗೆ

ಸಂಬಂಧಿಸಿದ ತಾಲ್ಲೂಕು ಅಧಿಕಾರಿ ಯಾರ ಗಮನಕ್ಕೆ ತರದೇ ಇರುವುದರಿಂದ ಅವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಗುತ್ತಿಗೆ ಅವಧಿಯಲ್ಲಿ ಪಡೆದಿರುವ ಇಲಾಖಾ ವಾಹನದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೬ (೮೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರಾವಾರ ಜಿಲ್ಲೆಯಲ್ಲಿ ಯಾವ ಯಾವ ಇಲಾಖೆಗೆ ಹೊರಗುತ್ತಿಗೆ ಆಧಾರದ ಮೇಲೆ ವಾಹನ ನೀಡಲಾಗಿದೆ; (ಟೆಂಡರ್ ಪ್ರತಿಯೊಂದಿಗೆ, ತಾಲ್ಲೂಕುವಾರು/ ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ವಾಹನ ಉಪಯೋಗಿಸಲು ಇರುವ ಮಾನದಂಡವೇನು; (ವಿವರ ನೀಡುವುದು)

(ಇ) ಕೆಲವೊಂದು ಇಲಾಖೆಯ ಅಧಿಕಾರಿಗಳು ತಮ್ಮ ವ್ಯಾಪ್ತಿ ಮೀರಿ ಅನಾವಶ್ಯಕವಾಗಿ ತಮ್ಮ ಸ್ವಂತ ಬಳಕೆಗೆ ಇಲಾಖಾ ವಾಹನ ಬಳಸಿಕೊಳ್ಳುತ್ತಿರುವುದು ಹಾಗೂ ತಮ್ಮ ವ್ಯಾಪ್ತಿ ಮೀರಿ ಹೊರ ಜಿಲ್ಲೆಗಳಿಗೂ ವಾಹನವನ್ನು ತೆಗೆದುಕೊಂಡು ಹೋಗಿ ವಾಸ್ತವ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ವಾಹನ ಪಡೆದು ಕರ್ತವ್ಯ ನಿರ್ವಹಿಸುವ ಬಗ್ಗೆ ಲಾಗ್‌ಬುಕ್ಕಿನಲ್ಲಿ ನಮೂದಿಸಿದ ವಾಹನದ ಓಡಾಟದ ವಿವರದೊಂದಿಗೆ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು ?

## ಯು.ಜಿ.ಡಿ. ಕಾಮಗಾರಿ ಅವೈಜ್ಞಾನಿಕ ರೀತಿಯಲ್ಲಿ ನಡೆಯುತ್ತಿರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೭ (೭೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ನಡೆಯುತ್ತಿರುವ ಯು.ಜಿ.ಡಿ. ಕಾಮಗಾರಿಯು ಅವೈಜ್ಞಾನಿಕವಾಗಿದ್ದು ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಳಪೆ ಕಾಮಗಾರಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು)

(ಆ) ಸರ್ಕಾರದಿಂದ ಬಂದ ಕೋಟ್ಯಾಂತರ ರೂಪಾಯಿ ಸರಿಯಾಗಿ ಉಪಯೋಗಿಸದೆ ಕಳಪೆ ಮಟ್ಟದ ಕಾಮಗಾರಿ ಮಾಡುತ್ತಿರುವ ಸದರಿ ಯು.ಜಿ.ಡಿ ಗುತ್ತಿಗೆ ಪಡೆದ ಸಂಸ್ಥೆಯ ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ಕೆ.ಆರ್.ಐ.ಡಿ.ಎಲ್ ಮೂಲಕ ಕಾಮಗಾರಿಗಳ ಅನುಷ್ಠಾನದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೮ (೮೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ (ಕೆ.ಆರ್.ಐ.ಡಿ.ಎಲ್) ನಿಂದ ನಿರ್ವಹಿಸುವ ಕಾಮಗಾರಿಗಳಿಗೆ ಬಳಸುವ ಸಿಮೆಂಟ್ ಮತ್ತು ಕಬ್ಬಿಣವನ್ನು ಯಾವ ಸಂಸ್ಥೆಗಳಿಂದ ಖರೀದಿಸಲಾಗುತ್ತಿದೆ; (ಇದಕ್ಕಿರುವ ಮಾನದಂಡಗಳೇನು)

(ಆ) ಕಳೆದ ಸಾಲಿನಲ್ಲಿ ಒಟ್ಟು ಎಷ್ಟು ಮೌಲ್ಯದ ಸಿಮೆಂಟ್ ಮತ್ತು ಕಬ್ಬಿಣವನ್ನು ಖರೀದಿಸಲಾಗಿದೆ;

(ಇ) ಕಳೆದ ಸಾಲಿನಲ್ಲಿ ಖರೀದಿಸಿದ ಸಿಮೆಂಟ್ ಮತ್ತು ಕಬ್ಬಿಣವನ್ನು ಪರೀಕ್ಷಿಸಿರುವ ವಿಧಾನ ಮತ್ತು ಪರೀಕ್ಷಿಸಿದ ಲ್ಯಾಬ್‌ನ ವಿವರಗಳೇನು; (ಪರೀಕ್ಷಾ ವರದಿಯನ್ನು ಒದಗಿಸುವುದು)

(ಈ) ಸಿಮೆಂಟನ್ನು ಖರೀದಿಸಿದ ನಂತರ ಕಾಮಗಾರಿಗಳಿಗೆ ಬಳಸುವವರೆಗೆ ಅದನ್ನು ಹೇಗೆ ಸಂರಕ್ಷಿಸಲಾಗುತ್ತದೆ; (ವಿವರ ನೀಡುವುದು)

(ಉ) ಅವಧಿ ಮೀರಿದ ಸಿಮೆಂಟ್‌ನ್ನು ಯಾವ ರೀತಿ ವಿಲೇವಾರಿ ಮಾಡಲಾಗುತ್ತದೆ; ಇಲ್ಲಿಯವರೆವಿಗೂ ಎಷ್ಟು ಸಿಮೆಂಟ್ ಬ್ಯಾಗ್‌ಗಳನ್ನು ವಿಲೇವಾರಿ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಊ) ೨೦೧೯-೨೦ನೇ ಸಾಲಿನಲ್ಲಿ ಕೆ.ಆರ್.ಐ.ಡಿ.ಎಲ್ ನಿಂದ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಯಾವ ಯಾವ ಇಲಾಖೆಯಿಂದ ಎಷ್ಟು ಕಾಮಗಾರಿಗಳನ್ನು ಪಡೆಯಲಾಗಿದೆ; (ಇಲಾಖಾವಾರು ವಿವರ ನೀಡುವುದು)

(ಋ) ಸದರಿ ಇಲಾಖೆಗಳಿಂದ ಕಾಮಗಾರಿಗಳು ಪೂರ್ಣಗೊಳ್ಳುವ ಮುನ್ನ ಪಡೆಯುವ ಮೊತ್ತವನ್ನು ಯಾವ ಬ್ಯಾಂಕ್‌ನಲ್ಲಿ ಠೇವಣಿ ಇಡಲಾಗಿದೆ; ಬ್ಯಾಂಕ್ ಠೇವಣಿಯಿಂದ ಬಂದ ಬಡ್ಡಿಯ ವಿವರಗಳೇನು; ಅದನ್ನು ಯಾವ ರೀತಿ ಬಳಕೆ ಮಾಡಲಾಗಿದೆ? (ವಿವರ ನೀಡುವುದು)

# ಅಲ್ಪಸಂಖ್ಯಾತರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೯ (೭೨೯) ಮಾನ್ಯ ಕೈಮುಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಸನ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು; ಯಾವಾಗ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ಯಾರು ? (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)

## ರಾಯಸಂದ್ರ ಅಮೃತ್ ಮಹಲ್ ಕಾವಲ್‌ಗೆ ಸೇರಿದ ಜಾಗದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೦ (೭೨೮) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿರುವ ರಾಯಸಂದ್ರ ಕಾವಲು ಅಮೃತ್ ಮಹಲ್‌ಗೆ ಸೇರಿದ ಒಟ್ಟು ಜಾಗವೆಷ್ಟು; (ವಿವರ ನೀಡುವುದು) ಸದರಿ ಜಮೀನಿನಲ್ಲಿ ಎಷ್ಟು ಎಕರೆ ಒತ್ತುವರಿಯಾಗಿದೆ; ಎಷ್ಟು ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಗೆ ನೀಡಲಾಗಿದೆ;

(ಆ) ಸದರಿ ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಗೆ ಯಾವಾಗ, ಯಾವ ಮಾರ್ಗಸೂಚಿಗಳನ್ವಯ ಮತ್ತು ಎಷ್ಟು ವರ್ಷಗಳಿಗೆ ನೀಡಲಾಗಿದೆ; (ಸರ್ಕಾರದ ಆದೇಶಗಳನ್ನು ನೀಡುವುದು)

(ಇ) ಸದರಿ ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಗೆ ನೀಡುವಾಗ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳೇನು; (ವಿವರ ನೀಡುವುದು)

(ಈ) ಸದರಿ ಜಮೀನಿನಲ್ಲಿ ಗಣಿಗಾರಿಕೆ ನಡೆಯುತ್ತಿರುವುದರಿಂದ ರಾಯಸಂದ್ರ ಕಾವಲಿನಲ್ಲಿ ತಳಿ ಸಂವರ್ಧನೆ ಕಾರ್ಯಗಳನ್ನು ಕೈಗೊಳ್ಳಲು ಮತ್ತು ರಾಸುಗಳ ಬೆಳವಣಿಗೆಗೆ ಮತ್ತು ಇತರೆ ಪೂರಕ ಚಟುವಟಿಕೆಗಳಿಗೆ ತೊಂದರೆಗಳಾಗಿವೆಯೇ; (ವಿವರ ನೀಡುವುದು)

(ಉ) ರಾಯಸಂದ್ರ ಅಮೃತಮಹಲ್ ತಳಿ ಸಂವರ್ಧನ ಉಪ ಕೇಂದ್ರದ ಕೊಟ್ಟಗೆಯ ತಗ್ಗು ಪ್ರದೇಶದಲ್ಲಿದ್ದು ಕೊಟ್ಟಿಗೆಯ ಮೇಲ್ಛಾವಣೆಯು ಭಾಗಶಃ ಇರುವುದರಿಂದ ಹೆಚ್ಚು ಮಳೆಯಾಗದ ಮಣ್ಣು ಮಿಶ್ರಿತ ನೀರು ಕೊಟ್ಟಿಗೆಗೆ ನುಗ್ಗಿ ಜಾನುವಾರುಗಳಿಗೆ ಬಹಳ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೧ (೭೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯ ಅನುದಾನದಡಿ ಗ್ರಾಮೀಣ ಭಾಗದಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಯಾವ ಇಲಾಖೆಯ ಮೂಲಕ ಕಾರ್ಯಗತಗೊಳಿಸಲಾಗುವುದು; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ; (ಗುತ್ತಿಗೆದಾರರ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಹಾಸನ ಜಿಲ್ಲೆಯಲ್ಲಿ ನಿರ್ವಹಿಸಲಾಗುತ್ತಿರುವ ಕಾಮಗಾರಿಗಳು ಬಹಳ ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರ ವೇತನದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೨ (೭೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ಕ್ಷುಲ್ಲಕ ಕಾರಣಗಳಿಗಾಗಿ ನೋಟಿಸ್ ಜಾರಿ ಮಾಡುವುದು, ವೇತನ ತಡೆಹಿಡಿಯುವುದು ಮತ್ತು ಇಲಾಖಾ ವಿಚಾರಣೆಗೆ ಒಳಪಡಿಸುವಂತಹ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಸರ್ಕಾರವು ಇತರೆ ಸರ್ಕಾರಿ ನೌಕರರಿಗೆ ನೀಡುತ್ತಿರುವ ಸಂಬಳ ಮತ್ತು ಇತರೆ ಭತ್ಯೆಗಳಿಗೆ ಹೋಲಿಸಿದಲ್ಲಿ ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ನೀಡುತ್ತಿರುವ ಸಂಬಳ ಮತ್ತು ಇತರೆ ಭತ್ಯೆಗಳು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ತಾರತಮ್ಯವನ್ನು ನಿವಾರಣೆ ಮಾಡಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ಡಿಪೋಗಳ ಸಂಖ್ಯೆ ಎಷ್ಟು; ಈ ಡಿಪೋಗಳು ಹೊಂದಿರುವ ಬಸ್ಸುಗಳ ಸಂಖ್ಯೆ ಎಷ್ಟು; ಹಾಸನ ಜಿಲ್ಲೆಯ ಕೆಎಸ್‌ಆರ್‌ಟಿಸಿ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರುಗಳ ವಿವರ ನೀಡುವುದು; ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ಸು ನಿಲ್ದಾಣಗಳ ಸಂಖ್ಯೆ ಎಷ್ಟು ಮತ್ತು ಅವುಗಳ ವಿವರ ನೀಡುವುದು?

## ಸಮಿತಿಗಳ ಕಾರ್ಯವ್ಯಾಪ್ತಿ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೩ (೮೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ/ತಾಲ್ಲೂಕು ಮತ್ತು ಪಂಚಾಯತ್ ವ್ಯಾಪ್ತಿಯಲ್ಲಿರುವ ಸಮಿತಿಗಳು ಎಷ್ಟು; ಇವುಗಳ ಕಾರ್ಯವ್ಯಾಪ್ತಿ ಮತ್ತು ಫಲಾನುಭವಿಗಳ ಆಯ್ಕೆ ಕುರಿತಂತೆ ವಿಸ್ತೃತವಾದ ಮಾಹಿತಿ ಒದಗಿಸುವುದು;

(ಆ) ಸಮಿತಿಗಳು ನೇಮಕಾತಿ ಅಧ್ಯಕ್ಷರ ಮತ್ತು ಸದಸ್ಯರ ಅಧಿಕಾರ ವ್ಯಾಪ್ತಿ/ಕಾರ್ಯ ವ್ಯಾಪ್ತಿ ಏನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ, ತಾಲ್ಲೂಕು ಮತ್ತು ಪಂಚಾಯಿತಿ ಸಮಿತಿಗಳ ಅಧ್ಯಕ್ಷ ಮತ್ತು ಸದಸ್ಯರುಗಳ ವಿವರಗಳನ್ನೊಳಗೊಂಡ ಪಟ್ಟಿಯೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ಕೊರೋನಾದಿಂದ ಮೃತಪಟ್ಟ ಸಾರಿಗೆ ಇಲಾಖೆಯ ನೌಕರರ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೪ (೭೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯ ನೌಕರರಲ್ಲಿ ಕೊರೋನಾ ಪೀಡಿತರ ಸಂಖ್ಯೆ ಎಷ್ಟು;

(ಆ) ಕೊರೋನಾ ಸೋಂಕಿನಿಂದ ಮೃತಪಟ್ಟ ನೌಕರರುಗಳ ಸಂಖ್ಯೆ ಎಷ್ಟು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ನೀಡಲಾದ ಆರ್ಥಿಕ ನೆರವಿನ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೨೫ (೮೧೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನಪದ ಮತ್ತು ವಾದ್ಯ ಸಂಗೀತ ಕಲಾವಿದರಿಗೆ ವೇಷ ಭೂಷಣ ಹಾಗೂ ವಾದ್ಯ ಪರಿಕರಗಳ ಖರೀದಿಗೆ ಆರ್ಥಿಕ ನೆರವು ನೀಡುವ ಕಾರ್ಯ ಕ್ರಮ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮವನ್ನು ಮುಂದುವರೆಸಿ ಆರ್ಥಿಕ ನೆರವು ನೀಡಲಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಜನ ಫಲಾನುಭವಿಗಳಿಗೆ ಆರ್ಥಿಕ ನೆರವನ್ನು ಒದಗಿಸಲಾಗಿದೆ;

(ಇ) ಕಾರ್ಯಕ್ರಮ ಜಾರಿಗೊಳಿಸದಿದ್ದಲ್ಲಿ ಕಾರಣವೇನು; ಈ ಕಾರ್ಯಕ್ರಮ ಜಾರಿಗೊಳಿಸುವುದು ಯಾವಾಗ ? (ಸಂಪೂರ್ಣ ಮಾಹಿತಿ ನೀಡುವುದು)

## ಸಂಪರ್ಕ ಸೇತುವೆಗಳ ಅನುದಾನದ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೨೬ (೮೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲಾ ಬೆಳ್ತಂಗಡಿ ತಾಲ್ಲೂಕಿನಲ್ಲಿ ನೆರೆಯಿಂದ ಹಾನಿಯಾಗಿ ಸಂಪೂರ್ಣ ಕುಸಿತಗೊಂಡಿರುವ ಸಂಪರ್ಕ ಸೇತುವೆಗಳಿಗೆ ಅನುದಾನ ಮಂಜೂರಾಗಿದೆಯೇ; ಎಷ್ಟು ಸೇತುವೆಗಳಿಗೆ ಅನುದಾನ ಮಂಜೂರಾಗಿದೆ; ಕಾಮಗಾರಿ ಯಾವ ಹಂತದಲ್ಲಿದೆ; (ಅಂಕಿ ಅಂಶಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಅನುದಾನ ಮಂಜೂರಾಗಿದ್ದಲ್ಲಿ, ಕಾಮಗಾರಿಯು ಯಾವ ಹಂತದಲ್ಲಿದೆ ? (ಮಾಹಿತಿ ನೀಡುವುದು)

## "ಪಶು ಭಾಗ್ಯ" ಯೋಜನೆಯ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೨೭ (೭೩೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಪಶು ಭಾಗ್ಯ" ಯೋಜನೆಯಡಿ ಫಲಾನುಭವಿಗಳನ್ನು ಗುರುತಿಸಲು ಇರುವ ಮಾನದಂಡಗಳೇನು ;

(ಆ) ಒಮ್ಮೆ ಲಾಭ ಪಡೆದ ಫಲಾನುಭವಿಗಳು ಮತ್ತೆ ಅರ್ಜಿ ಸಲ್ಲಿಸಿ ಯೋಜನೆಯ ಲಾಭವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಕ್ಷಿಪ್ತ ಮಾಹಿತಿ ನೀಡುವುದು)

## ಪಿ.ಡಿ.ಓ ಗಳ ಭ್ರಷ್ಟಾಚಾರದ ಬಗ್ಗೆ

**ಶ್ರೀ ಬಿ. ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೮ (೬೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪಿ.ಡಿ.ಓ. ಗಳ ಭ್ರಷ್ಟಾಚಾರದ ಬಗ್ಗೆ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ಅವರ ಮೇಲಿನ ಆರೋಪಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಬಂಧ ತನಿಖೆ ನಡೆಯುತ್ತಿರುವ ಪ್ರಕರಣಗಳೆಷ್ಟು; ತನಿಖಾಮುಕ್ತರಾದ ಪ್ರಕರಣಗಳೆಷ್ಟು;

(ಇ) ತಪ್ಪಿತಸ್ಥರ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದೇ ?

## ಆಯವ್ಯಯದಲ್ಲಿ ಘೋಷಿಸಿರುವಂತೆ ನಿಗಧಿಯಾದ ಅನುದಾನದ ಸದ್ಬಳಕೆಯ ಬಗ್ಗೆ

**ಶ್ರೀ ಬಿ. ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೯ (೬೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಬೆಂಗಳೂರಿನ ಇಂದಿರಾನಗರದಲ್ಲಿರುವ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಕಟ್ಟಡದಲ್ಲಿ ವಿಶೇಷ ಶಿಕ್ಷಕರ ಶಿಕ್ಷಣಕ್ಕಾಗಿ ತರಬೇತಿ ಕೇಂದ್ರವನ್ನು ವಿಶೇಷ ಬಿ.ಇ.ಡಿ. ಕಾಲೇಜನ್ನು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳ ಪಾಲುದಾರಿಕೆಯಲ್ಲಿ

ಆರಂಭಿಸಲಾಗುವುದೆಂದು ಘೋಷಿಸಿದ್ದು, ಸದರಿ ತರಬೇತಿ ಕೇಂದ್ರ ಆರಂಭಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗಿನಿಂದ ಆರಂಭಿಸಲಾಗಿದೆ;

(ಆ) ಆರಂಭಿಸಿಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ಆರಂಭಿಸಿರುವುದಿಲ್ಲ; ಯಾವಾಗ ಆರಂಭಿಸಲಾಗುವುದು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಆಯವ್ಯಯದಲ್ಲಿ ಘೋಷಿಸಿರುವಂತೆ ಕಲಾವಿದರಿಗೆ ಮಾಸಾಶನವನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೦ (೬೯೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಆಯುವ್ಯಯದಲ್ಲಿ ಘೋಷಿಸಿರುವಂತೆ ಇಳಿವಯಸ್ಸಿನ ಅಶಕ್ತ ಕಲಾವಿದರ ಗೌರವಯುತ ಜೀವನ ನಿರ್ವಹಣೆಗಾಗಿ ನೀಡುತ್ತಿರುವ ಮಾಸಾಶನ ಮೊತ್ತವನ್ನು ರೂ.೧೦೦೦ ರಿಂದ ೧೫೦೦ ರೂಗಳಿಗೆ ಹೆಚ್ಚಿಸಿ ಒಟ್ಟು ೮೩೩೦ ಕಲಾವಿದರಿಗೆ ಮಾಸಾಶನ ಮಂಜೂರು ಮಾಡಲಾಗಿರುವುದನ್ನು ಅನುಷ್ಠಾನಕ್ಕೆ ತರಲಾಗುವುದೇ ;

(ಆ) ಈ ಯೋಜನೆಯನ್ನು ವಿಸ್ತರಿಸಿ ಇನ್ನು ಹೆಚ್ಚಿನ ಕಲಾವಿದರನ್ನು ಗುರುತಿಸಿ ಅವರುಗಳಿಗೂ ಸಹ ಮಾಸಾಶನ ಮಂಜೂರು ಮಾಡಲಾಗುತ್ತಿದೆಯೇ ; ಮಂಜೂರು ಮಾಡಿದ್ದಲ್ಲಿ, ಇದೂವರೆಗೂ ಮಾಸಾಶನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವರದಿ ನೀಡುವುದು)

## ಹಜ್ ಮತ್ತು ವಕ್ಫ್ ಇಲಾಖೆಗೆ ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ವಿನಿಯೋಗಿಸುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೧ (೬೮೨) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಸಾಲಿನಲ್ಲಿ ಯಾವ ಯಾವ ಯೋಜನೆಗಳಿಗೆ ಹಜ್ ಮತ್ತು ವಕ್ಫ್ ಇಲಾಖೆಯಿಂದ ಎಷ್ಟು ಹಣವನ್ನು ನಿಗದಿ ಮಾಡಲಾಗಿದೆ ;

(ಆ) ಕಳೆದ ಸಾಲಿನಲ್ಲಿ ಹಜ್ ಮತ್ತು ವಕ್ಫ್ ಇಲಾಖೆಯಿಂದ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಸದರಿ ಹಣದಿಂದ ಇದುವರೆವಿಗೂ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಕಳೆದ ಸಾಲಿನಲ್ಲಿ ಹಜ್ ಮತ್ತು ವಕ್ಫ್ ಇಲಾಖೆಯಿಂದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಈ) ಬಿಡುಗಡೆ ಮಾಡಿದ ಅನುದಾನದಲ್ಲಿ ಖರ್ಚಾಗಿರುವ ಮತ್ತು ಉಳಿದಿರುವ ಹಣವೆಷ್ಟು ; ಯಾವ ಕಾರಣಕ್ಕೆ ಖರ್ಚಾಗದೇ ಉಳಿದಿದೆ ? (ಸಂಪೂರ್ಣ ವಿವರ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೨ (೮೧೧) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ

:–

(ಅ) ಕಳೆದ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಎಷ್ಟು ಅನುದಾನ ನೀಡಲಾಗಿದೆ ;

(ಆ) ರಾಜ್ಯದ ಎಷ್ಟು ವಿಧಾನಸಭಾ ಕ್ಷೇತ್ರದ ಅಲ್ಪಸಂಖ್ಯಾತ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಬೇಡಿಕೆ ಬಂದಿದೆ ; (ವಿವರ ನೀಡುವುದು)

(ಇ) ಎಷ್ಟು ಅಲ್ಪಸಂಖ್ಯಾತ ಕಾಲೋನಿಯನ್ನು ಅಭಿವೃದ್ಧಿ ಪಡಿಸಲಾಗಿದೆ ; ಎಷ್ಟು ಹಣವನ್ನು ವಿನಿಯೋಗ ಮಾಡಲಾಗಿದೆ ;

(ಈ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿಗಾಗಿ ಸ್ಥಾಪಿಸಲಾದ ಉರ್ದು ಅಕಾಡೆಮಿಗೆ ಅಧ್ಯಕ್ಷರನ್ನು ನೇಮಿಸಲಾಗಿದೆಯೇ ? (ವಿಳಂಬವಾಗಲು ಕಾರಣವೇನು)

## ಪ್ರವಾಸೋದ್ಯಮ ನಿಗಮದಲ್ಲಿ ಬರುವ ಆಸ್ತಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೩ (೭೭೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮದ ಅಧೀನದಲ್ಲಿ ಬರುವ ಆಸ್ತಿಗಳು ಯಾವುವು ; ಅವು ಎಲ್ಲಿವೆ ; ಅವುಗಳನ್ನು ಯಾವ ಕೆಲಸಗಳಿಗೆ ಉಪಯೋಗಿಸಿಕೊಳ್ಳಲಾಗುತ್ತಿದೆ ; (ವಿವರವಾದ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೦೧ನೇ ಸಾಲಿನಿಂದ ಇಲ್ಲಿಯವರೆಗೆ ಸದರಿ ಆಸ್ತಿಗಳಲ್ಲಿ ಎಷ್ಟು ಆಸ್ತಿಗಳನ್ನು ಬೇರೆಯವರಿಗೆ/ಸಂಸ್ಥೆ/ಇತರರಿಗೆ ಕ್ರಯ/ಗುತ್ತಿಗೆ/ ಇತರೆ ಮಾಡಿಕೊಳ್ಳಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಪ್ರವಾಸೋದ್ಯಮ ಆಸ್ತಿಗಳನ್ನು ರಕ್ಷಿಸಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ವಿಶ್ವ ಪಾರಂಪರಿಕ ತಾಣಗಳು ಕರ್ನಾಟಕದಲ್ಲಿ ಇದ್ದಾಗ್ಯೂ ಪ್ರವಾಸೋದ್ಯಮದಲ್ಲಿ ಕರ್ನಾಟಕವು ಕೇರಳ ಪ್ರವಾಸೋದ್ಯಮಕ್ಕಿಂತ ಹಿಂದೆ ಇರಲು ಕಾರಣಗಳೇನು ; ಇದರ ಸಂಬಂಧ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ?

## ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು & ಖರ್ಚು ವೆಚ್ಚಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೪ (೭೭೨) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಅಲ್ಪ ಸಂಖ್ಯಾತರ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ;

ಅದದರಲ್ಲಿ ಖರ್ಚಾಗಿರುವ ಮೊತ್ತ ಎಷ್ಟು ; ಮತ್ತು ಉಳಿದಿರುವ ಮೊತ್ತ ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ ಅಲ್ಪಸಂಖ್ಯಾತರ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು/ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಈ) ಈ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಮೀಸಲಾತಿ ಮತ್ತು ಪ್ರವರ್ಗಗಳನ್ನು ನಿಗದಿಪಡಿಸಲು ಅನುಸರಿಸುತ್ತಿರುವ ಮಾನದಂಡಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೫ (೭೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಸದಸ್ಯರುಗಳಿಗೆ ಮತ್ತು ಅಧ್ಯಕ್ಷರುಗಳಿಗೆ ಹಾಲಿ ಜಾರಿಯಲ್ಲಿರುವ ಮೀಸಲಾತಿ ಹಾಗೂ ಅದರ ಪ್ರವರ್ಗಗಳು ಯಾವುವು ;

(ಆ) ಸದರಿ ಮೀಸಲಾತಿ ಹಾಗೂ ಪ್ರವರ್ಗಗಳನ್ನು ನಿಗದಿಪಡಿಸಲು ಅನುಸರಿಸುತ್ತಿರುವ ಮಾನದಂಡಗಳು ಹಾಗೂ ಮಾರ್ಗಸೂಚಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಮೀಸಲಾತಿ ಹಾಗೂ ಪ್ರವರ್ಗಗಳನ್ನು ಎಷ್ಟು ವರ್ಷಗಳಿಗೊಮ್ಮೆ ಬದಲಾವಣೆ ಮಾಡಲಾಗಿದೆ ಬದಲಾವಣೆ ಮಾಡಲು ಯಾವ ಮಾನದಂಡಗಳನ್ನು ಅನುಸರಿಲಾಗುತ್ತದೆ ; ; (ವಿವರವಾದ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆ ತುರುವೇಕೆರೆ ತಾಲೂಕಿನಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಇವೆ ; ಅವುಗಳ ವ್ಯಾಪ್ತಿಗೆ ಒಳಪಡುವ ಹಳ್ಳಿಗಳು ಯಾವುವು ? (ಪಂಚಾಯಿತಿವಾರು ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯ ನಿಗಮದ ಸಿಬ್ಬಂದಿ ವೆಚ್ಚ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೬ (೭೭೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೧ ರಿಂದ ಕರ್ನಾಟಕ ರಾಜ್ಯ ಪ್ರವಾಸೋಧ್ಯಮ ನಿಗಮದಲ್ಲಿ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಎಷ್ಟು ಅರ್ಜಿಗಳನ್ನು ಸಲ್ಲಿಸಲಾಗಿದೆ ; ಎಷ್ಟು ಜನರಿಗೆ ಕೆಲಸ ನೀಡಲಾಗಿದೆ ; ಬಾಕಿ ಇರುವ ಅರ್ಜಿಗಳು ಎಷ್ಟು ; (ನೌಕರರ ಹೆಸರು, ಅರ್ಜಿ ಸಲ್ಲಿಸಿದವರ ವಿಳಾಸ ಮತ್ತು ದಿನಾಂಕದೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ನಿಗಮಗಳಲ್ಲಿ ಅನುಕಂಪದ ಆಧಾರದ ಮೇಲೆ ಕೆಲಸ ನೀಡಲು ನಿರ್ಬಂಧ ಇದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಬಾಕಿ ಇರುವ ಅರ್ಜಿದಾರರಿಗೆ ಸರ್ಕಾರವು ಯಾವಾಗ ಕೆಲಸ ನೀಡಿ ಅವರಿಗೆ ಅನುಕೂಲ ಮಾಡಲಾಗುವುದು ;

(ಈ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮವು ೨೦೦೧ ರಿಂದ ಇಲ್ಲಿಯವರೆಗೆ ಯಾವ ಯಾವ ವರ್ಷಗಳಲ್ಲಿ ಲಾಭದಲ್ಲಿದೆ ; ಯಾವ ವರ್ಷಗಳಲ್ಲಿ ನಷ್ಟದಲ್ಲಿದೆ ; ಒಟ್ಟಾರೆ ಸವಕಳಿ ನಷ್ಟವೆಷ್ಟು ; ಲಾಭವೆಷ್ಟು ? (ವರ್ಷಾವಾರು ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಾನೂನುಬಾಹಿರವಾಗಿ ನಡೆಯುತ್ತಿರುವ ಬಾಲ್ಯ ವಿವಾಹ ಪದ್ಧತಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೭ (೮೦೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಲ್ಯವಿವಾಹ ಪದ್ಧತಿ ನಿಯಮಬಾಹಿರವಾಗಿದ್ದರೂ ಇತ್ತೀಚೆಗೆ ಹಲವಾರು ಪ್ರಕರಣಗಳು ಬೆಳಕಿಗೆ ಬಂದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಾಲ್ಯವಿವಾಹಗಳಿಗೆ ತುತ್ತಾಗಿ ಎಷ್ಟು ಬಾಲಕಿಯರು ವಿಧವೆಯರಾಗಿದ್ದಾರೆ ;

(ಇ) ಅವರುಗಳು ಮರುಮದುವೆ ಆಗಲು ಮುಂದೆ ಬಂದಲ್ಲಿ ಸರ್ಕಾರ ಅವರಿಗೆ ಹೇಗೆ ರಕ್ಷಣೆಯನ್ನು ನೀಡುತ್ತಿದೆ ;

(ಈ) ಎಷ್ಟು ಬಾಲ್ಯ ವಿವಾಹ ಪ್ರಕರಣಗಳನ್ನು ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದು ನಿಲ್ಲಿಸಲಾಗಿದೆ ?

## ಗ್ರಾಮ ಪಂಚಾಯತ್ ಚುನಾವಣೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೮ (೮೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಪಂಚಾಯತ್ ಸದಸ್ಯರ ಅವಧಿ ಮುಗಿದಿದ್ದು, ಮರು ಚುನಾವಣೆಗಳು ನಡೆಯಬೇಕಾಗಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ;

(ಆ) ಸದರಿ ಪಂಚಾಯುತ್ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು ;

(ಇ) ಕೋವಿಡ್–೧೯ ಗ್ರಾಮೀಣ ಪ್ರದೇಶಗಳಲ್ಲಿ ಹರಡಿದ್ದು ಚುನಾವಣೆಯನ್ನು ಹೇಗೆ ನಡೆಸಲಾಗುವುದು ಯಾವ ತರಹದ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಚುನಾವಣೆ ನಡೆಸಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೯ (೮೦೪) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ ;

(ಇ) ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪದ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಪಶು ಆಸ್ಪತ್ರೆಗಳಲ್ಲಿ ಔಷಧಿಗಳು ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯ ಸರ್ಕಾರ & ಸರ್ಕಾರೇತರರು ನಡೆಸುವ ಮಕ್ಕಳ ನಿಲಯಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೦ (೯೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರರು ನಡೆಸುವ ಮಕ್ಕಳ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಮಕ್ಕಳ ನಿಲಯಗಳಲ್ಲಿ ಕೋವಿಡ್–೧೯ ಸಾಂಕ್ರಾಮಿಕ ರೋಗದ ಸೋಂಕು ಉಂಟಾಗದಂತೆ ತಡೆಯಲು ಇಲ್ಲಿಯವರೆಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ಇಂತಹ ನಿಲಯುಗಳಲ್ಲಿ ಎಷ್ಟು ಮಕ್ಕಳಿಗೆ ಸೋಂಕು ಉಂಟಾಗಿರುವುದು ಪತ್ತೆಯಾಗಿದೆ ; ಎಷ್ಟು ಮಕ್ಕಳು ಸೋಂಕಿನ ಕಾರಣದಿಂದ ನಿಧನರಾಗಿದ್ದಾರೆ ;

(ಈ) ಎಷ್ಟು ನಿಲಯಗಳನ್ನು ಈ ಹಿನ್ನೆಲೆಯಲ್ಲಿ ಮುಚ್ಚಲಾಗಿದೆ ; ಮುಚ್ಚಲಾದ ವಸತಿ ನಿಲಯಗಳಲ್ಲಿ ಉಳಿದಿರುವ ಮಕ್ಕಳಿಗೆ ಯಾವ ರೀತಿಯ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ;

(ಉ) ಕೋವಿಡ್–೧೯ ಕಾರಣಕ್ಕಾಗಿ ಎಷ್ಟು ಮಕ್ಕಳು ಅನಾಥರಾಗಿದ್ದಾರೆ ; ಮತ್ತು ಅವರಿಗಾಗಿ ಯಾವ ರೀತಿಯ ವ್ಯವಸ್ಥೆ ಮಾಡಲಾಗಿದೆ ?

## ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೧ (೯೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸಲು ೨೦೦೬ರಲ್ಲಿ ಸುತ್ತೋಲೆ ಹೊರಡಿಸಲಾಗಿದ್ದು, ಪಟ್ಟಣ ಪ್ರದೇಶ ಮಕ್ಕಳ ಸಮಸ್ಯೆಗಳನ್ನು ಆಲಿಸುವ ಕುರಿತು ಸರ್ಕಾರದ ಕ್ರಮವೇನು ;

(ಆ) ಮಕ್ಕಳ ಗ್ರಾಮ ಸಭೆಗಳು ಕೇವಲ ಗ್ರಾಮೀಣ ಭಾಗಕ್ಕೆ ಮಾತ್ರ ಸೀಮಿತವಾಗಿದ್ದು, ನಗರವನ್ನು ಮಕ್ಕಳ ಸ್ನೇಹಿ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಗರ ಪ್ರದೇಶಗಳ ಪ್ರತಿ ವಾರ್ಡ್‌ಗಳಲ್ಲಿ ಇರುವ ಮಕ್ಕಳ ಸಂಖ್ಯೆಗಳ ಅಂಕಿ ಅಂಶ ಸರ್ಕಾರದ ಬಳಿ ಇದೆಯೇ ; ತಿಂಗಳಲ್ಲಿ ಒಂದು ದಿನದ ಮಟ್ಟಿಗೆ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಬಗ್ಗೆ ಸರ್ಕಾರದ ನಿಲುವೇನು ?

## ಗ್ರಾಮ ಪಂಚಾಯಿತಿಗಳ ಆಡಳಿತ ಕುಸಿದಿರುವ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೨ (೭೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಡಳಿತಾವಧಿ ಮುಗಿದಿರುವ ಗ್ರಾಮಪಂಚಾಯಿತಿಗಳ ಆಡಳಿತ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಡಳಿತ ನಿಗಾ ವಹಿಸಲು ನೇಮಕಗೊಂಡಿರುವ ಅಧಿಕಾರಿಗಳು ಹೆಚ್ಚುವರಿ ಕಾರ್ಯಭಾರದಿಂದ ಗ್ರಾಮ ಪಂಚಾಯಿತಿಗಳ ಆಡಳಿತವನ್ನು ನಿರ್ಲಕ್ಷ್ಯ ವಹಿಸಿರುವ ಬಗ್ಗೆ ದೂರುಗಳು ಬಂದಿವೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನೇಕಾರ ಕಾರ್ಮಿಕ ಕುಟುಂಬಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೩ (೭೦೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲಾಕ್‌ಡೌನ್ ಕಾರಣದಿಂದ ಲಕ್ಷಾಂತರ ನೇಕಾರ ಕಾರ್ಮಿಕ ಕುಟುಂಬಗಳು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಆರ್ಥಿಕ ಸಮಸ್ಯೆಗೆ ಸಿಲುಕಿ ಆತ್ಮಹತ್ಯೆಗೆ ಶರಣಾದ ನೇಕಾರರ ಕುಟುಂಬದವರಿಗೆ ಸರ್ಕಾರ ಪರಿಹಾರ ನೀಡಿದೆಯೇ ?

## ಕ್ರೀಡಾ ವಸತಿ ನಿಲಯಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೪೪ (೭೯೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕ್ರೀಡಾ ವಸತಿ ನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ಸಾಲಿನಲ್ಲಿ ವಸತಿ ನಿಲಯಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು;

(ಇ) ಸದರಿ ವಸತಿ ನಿಲಯಗಳಲ್ಲಿ ಯಾವ ತರಗತಿಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುವುದು ;

(ಈ) ಕಳೆದ ಸಾಲಿನಲ್ಲಿ ಸದರಿ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ತರಬೇತಿದಾರರ ಮತ್ತು ಗುತ್ತಿಗೆ ತರಬೇತಿದಾರರ ಸಂಖ್ಯೆ ಎಷ್ಟು ;

(ಉ) ಸದರಿಯವರಿಗೆ ನೀಡಲಾಗುತ್ತಿರುವ ಮಾಸಿಕ ವೇತನವೆಷ್ಟು ;

(ಊ) ಇದುವರೆವಿಗೆ ಸದರಿ ತರಬೇತಿದಾರರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅಲ್ಪಸಂಖ್ಯಾತರ ಇಲಾಖೆಯ ಸನಿವಾಸ ಶಾಲೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೪೫ (೭೯೬) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಇಲಾಖೆಯಡಿಯ ಸನಿವಾಸ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಶಾಲೆಗಳಲ್ಲಿನ ಬೋಧಕ/ಬೋಧಕೇತರರಿಗೆ ಕಾಲಮಿತಿ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸದರಿ ಕಾಲಮಿತಿ ವೇತನ ಬಡ್ತಿ ನೀಡುವಲ್ಲಿನ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಕಾಲಮಿತಿ ವೇತನ ಬಡ್ತಿ ನೀಡಲಾಗುವುದು ?

## ಪ್ರತಿ ಮನೆಗೂ ಶೌಚಾಲಯ ನಿರ್ಮಿಸುವ ಯೋಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೪೬ (೭೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳ ಬಡವರ ಪ್ರತಿಯೊಬ್ಬರ ಮನೆಗಳಿಗೂ ಶೌಚಾಲಯ ನಿರ್ಮಿಸುವ ಯೋಜನೆ ರೂಪಿಸಲಾಗಿದೆಯೇ ;

(ಆ) ಸದರಿ ಯೋಜನೆಯ ರೂಪುರೇಷೆಗಳೇನು ; (ವಿವರ ನೀಡುವುದು)

(ಇ) ಯೋಜನೆಯ ಅಂದಾಜು ಮೊತ್ತವೆಷ್ಟು ;

(ಈ) ಇದುವರೆವಿಗೂ ರಾಜ್ಯದಲ್ಲಿ ಎಷ್ಟು ಮನೆಗಳಿಗೆ ಶೌಚಾಲಯ ಸೌಲಭ್ಯ ಕಲ್ಪಿಸಲಾಗುವುದು ;

(ಉ) ಯಾವ ಕಾಲಮಿತಿಯಲ್ಲಿ ಸಂಪೂರ್ಣವಾಗಿ ಶೌಚಾಲಯ ಸೌಲಭ್ಯವನ್ನು ಕಲ್ಪಿಸಲಾಗುವುದು ?

## ವಿದ್ಯಾರ್ಥಿಗಳಿಗೆ ರಿಯಾಯಿತಿ ಬಸ್ ಪಾಸ್ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೪೭ (೭೯೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯಾರ್ಥಿಗಳಿಗೆ ರಿಯಾಯಿತಿ ಬಸ್ ಪಾಸ್ ಸೌಲಭ್ಯಗಳನ್ನು ನೀಡಲಗುತ್ತಿದೆಯೇ ;

(ಆ) ರಿಯಾಯಿತಿ ಪಾಸ್ ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಕಳೆದ ಸಾಲಿನಲ್ಲಿ ನೀಡಿದಂತಹ ರಿಯಾಯಿತಿ ಸೌಲಭ್ಯಗಳನ್ನು ಪ್ರಸಕ್ತ ಸಾಲಿನಲ್ಲೂ ಮುಂದುವರೆಸಲಾಗುವುದೇ ;

(ಈ) ಹಾಗಿದ್ದಲ್ಲಿ, ಸದರಿ ಸೌಲಭ್ಯಗಳ ಪೂರ್ಣ ವಿವರಗಳನ್ನು ನೀಡುವುದು ?

## ಪಶುಚಿಕಿತ್ಸಾಲಯಗಳಲ್ಲಿ ಸಿಬ್ಬಂದಿ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೪೮ (೭೯೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಶುಚಿಕಿತ್ಸಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ತಜ್ಞ ವೈದ್ಯರ/ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಪಶುಚಿಕಿತ್ಸಾಲಯಗಳಲ್ಲಿರುವ ಪಶುತಜ್ಞ ವೈದ್ಯರ/ ವೈದ್ಯಧಿಕಾರಿಗಳ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯರ/ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಉ) ಇವರುಗಳಿಗೆ ನೀಡಲಾಗುತ್ತಿರುವ ಮಾಸಿಕ ವೇತನವೆಷ್ಟು ;

(ಊ) ಇವರನ್ನು ಖಾಯಂಗೊಳಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ?

## ರಾಜ್ಯದಲ್ಲಿ ನೋಂದಾವಣೆಯಾಗದೇ ಜೆಸಿಬಿಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೬೪೯ (೭೫೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೋಂದಾಣಿಯಾದ ಜೆಸಿಬಿಗಳ ಸಂಖ್ಯೆ ಎಷು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಜೆಸಿಬಿ ಗಳ ಸಂಖ್ಯೆ ಎಷ್ಟು ; (ಪ್ರಾದೇಶಿಕ ಸಾರಿಗೆ ಕಛೇರಿವಾರು ವಿವರಗಳನ್ನು ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ನೋಂದಾಣಿಯಾದ ಜೆಸಿಬಿ ಗಳ ಸಂಖ್ಯೆ ಎಷ್ಟು ; (ಜೆಸಿಬಿ ಗಳ ನೋಂದಣಿ ಸಂಖ್ಯೆ ಮತ್ತು ಮಾಲೀಕರ ವಿಳಾಸವನ್ನು ಒದಗಿಸುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಅಕ್ರಮವಾಗಿ ನೋಂದಾಣಿಯಾಗದಿರುವ ಜೆಸಿಬಿ ಗಳನ್ನು ಮತ್ತು ಇನ್ಯಾವುದೇ ಜೆಸಿಬಿ ಸಂಖ್ಯೆಯಲ್ಲಿ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಪ್ರಕರಣವಾರು ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಶುದ್ಧೀಕರಿಸಿದ ಕುಡಿಯುವ ನೀರನ್ನು ಪೂರೈಸುವ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೬೫೦ (೭೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತ ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಿಡಬ್ಲ್ಯೂಎಸ್ (Piped water supply) ಮತ್ತು ಎಂಡಬ್ಲ್ಯೂಎಸ್ (mini water supply) ಮೂಲಕ ಸಾರ್ವಜನಿಕರಿಗೆ ಕುಡಿಯುವ ನೀರನ್ನು ನೀಡುತ್ತಿರುವ ಗ್ರಾಮ, ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ನೀರನ್ನು ಶುದ್ಧೀಕರಿಸದೇ ನೇರವಾಗಿ ಕುಡಿಯುವ ನೀರಿನ ಮೂಲವಾದ ಬಾವಿ ಮತ್ತು ನದಿಗಳಿಂದ ಜನರಿಗೆ ನೀಡುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; Pressure filter ಅಳವಡಿಸಿ ನೀರನ್ನು ಶುದ್ಧೀಕರಿಸಿ ಜನರಿಗೆ ನೀಡುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಬೇಸಿಗೆಯಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಪೂರೈಸಲು ಸರ್ಕಾರದಿಂದ ವಿಧಿಸಲಾದ ಷರತ್ತುಗಳೇನು ; ಶುದ್ಧೀಕರಿಸಿದ ನೀರನ್ನು ಪೂರೈಸದ ಬದಲಿಗೆ

ಬಾವಿ ಮತ್ತು ಹೊಳೆಗಳಿಂದ ನೇರವಾಗಿ ಟ್ಯಾಂಕರ್ ಮೂಲಕ ನೀರನ್ನು ಪೂರೈಸುವವರ ವಿರುದ್ಧ ಯಾವ ಕ್ರಮ ವಹಿಸಲಾಗಿದೆ; ಕ್ರಮ ವಹಿಸದಿದ್ದಲ್ಲಿ, ಕಾರಣವೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಬೇಸಿಗೆಯಲ್ಲಿ ಟ್ಯಾಂಕರ್ ನೀರು ಸರಬರಾಜಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; (ವರ್ಷವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಪ್ರತಿ ವರ್ಷ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡುವ ಗ್ರಾಮಗಳಿಗೆ ಶಾಶ್ವತ ಶುದ್ಧ ಕುಡಿಯುವ ನೀರನ್ನು ಒದಗಿಸುವ ಕುರಿತು ಸರ್ಕಾರದಿಂದ ಯಾವ ಕ್ರಮ ವಹಿಸಲಾಗಿದೆ ?

## ಕೋವಿಡ್–೧೯ರ ಹಿನ್ನೆಲೆಯಲ್ಲಿ ಖಾಸಗಿ ಮತ್ತು ಸರ್ಕಾರಿ ಬಸ್ಸುಗಳ ಸಂಚಾರದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೬೫೧ (೭೪೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋವಿಡ್–೧೯ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ನಿಯಮಾವಳಿಗಳು ಜಾರಿಗೆ ಬರುವ ಪೂರ್ವದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸರ್ಕಾರಿ ಮತ್ತು ಖಾಸಗಿ ಬಸ್ಸುಗಳ ಸಂಖ್ಯೆ ಎಷ್ಟು ; (ಪ್ರಾದೇಶಿಕ ಸಾರಿಗೆ ಕಛೇರಿವಾರು ವಿವರ ಸಲ್ಲಿಸುವುದು)

(ಆ) ಲಾಕ್‌ಡೌನ್ ನಿಯಮಾವಳಿಯ ಸಡಲಿಕೆ ನಂತರ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಖಾಸಗಿ ಬಸ್ಸುಗಳ

ಸಂಖ್ಯೆ ಎಷ್ಟು ; (ಪ್ರಾದೇಶಿಕ ಸಾರಿಗೆ ಕಛೇರಿವಾರು ವಿವರ ಸಲ್ಲಿಸುವುದು)

(ಇ) ಈ ವ್ಯತ್ಯಾಸವನ್ನು ಸರಿಪಡಿಸಲು ಸರ್ಕಾರದ ತುರ್ತು ಕ್ರಮವೇನು ?

## ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಮೂಲಭೂತ ಅವಶ್ಯಕತೆಯನ್ನು ಕಲ್ಪಿಸುವ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೬೫೨ (೭೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸ್ವಂತ ನಿವೇಶನ ಹೊಂದಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವಿವರವನ್ನು ನೀಡುವುದು)

(ಆ) ರಾಜ್ಯದಲ್ಲಿ ಸ್ಮಶಾನ/ಧಪನ ಭೂಮಿಯನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಚಿತಾಗಾರವನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಸ್ಮಶಾನ/ಧಪನ ಭೂಮಿಯನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ಗ್ರಾಮ ಪಂಚಾಯತಿಗಳಿಗೆ ಮಂಜೂರಾತಿಯಾದ ಮನೆಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ

ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ನಿವೇಶನ ರಹಿತರಿಗೆ ನಿವೇಶನ ಹಂಚುವ ವಸತಿಯನ್ನು ನೀಡುವ ಗ್ರಾಮ ಪಂಚಾಯತಿಗಳು ಸ್ವಂತ ಕಟ್ಟಡವನ್ನು ಹೊಂದಲಾಗದೇ ಅಸಹಾಯಕತೆಯ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲಾಖೆಯಿಂದ ಗ್ರಾಮ ಪಂಚಾಯತಿಗೆ ಸ್ವಂತ ಕಟ್ಟಡವನ್ನು ಒದಗಿಸಲು ಕಾಲಮಿತಿ ಹಾಕಿ ಕೊಳ್ಳಲಾಗಿದೆಯೇ ?

## ಬಾಪೂಜಿ ಸೇವಾ ಕೇಂದ್ರದಲ್ಲಿ ೧೦೧ ಸೇವೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೬೫೩ (೮೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦೧ ಸೇವೆಗಳನ್ನು ಗ್ರಾಮ ಪಂಚಾಯತ್ ಮಟ್ಟದಲ್ಲಿ ನೀಡಲು ಉದ್ದೇಶಿಸಿದ ಸರ್ಕಾರದ ಮಹತ್ವಾಕಾಂಕ್ಷಿ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಈಗ ಎಷ್ಟು ಸೇವೆಗಳನ್ನು ಗ್ರಾಮೀಣ ಪ್ರದೇಶದ ಜನರಿಗೆ ನೀಡಲಾಗುತ್ತಿದೆ ; ಈಗ ನಿಡಲಾಗುತ್ತಿರುವ ಸೇವೆಗಳ ವಿವರ ಒದಗಿಸುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಬಾಪೂಜಿ ಸೇವಾ ಕೇಂದ್ರದಲ್ಲಿ ಸಂಗ್ರಹಿಸಿದ ಸೇವಾ ಶುಲ್ಕವೆಷ್ಟು ; ಬಾಪೂಜಿ ಸೇವಾ ಕೇಂದ್ರಗಳ ನಿರ್ವಹಣೆಗೆ ಮಾಡಲಾದ ವೆಚ್ಚವೆಷ್ಟು ; ಬಾಪೂಜಿ ಸೇವಾ ಕೇಂದ್ರಗಳನ್ನು ಯಾವುದೇ ಲಾಭ ಮತ್ತು ನಷ್ಟವಿಲ್ಲದೇ

(No profit no loss) ನಿರ್ವಹಿಸಲು ಹೆಚ್ಚು ಹೆಚ್ಚು ಸೇವೆಗಳನ್ನು ಒದಗಿಸುವ ಮೂಲಕ ಸದೃಡವಾಗಿರುವ ಚಿಂತನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಸೇವೆಗಳನ್ನು ನೀಡುವ ಉದ್ದೇಶವನ್ನು ಹೊಂದಲಾಗಿದೆ ;

(ಇ) ಬಾಪೂಜಿ ಸೇವಾ ಕೇಂದ್ರದಲ್ಲಿ ದೊರೆಯುವ ಸೇವೆಗಳನ್ನು ಪರಿಣಾಮಕಾರಿಯಾಗಿಸಲು ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಕಂದಾಯ ಇಲಾಖೆಯ ನಡುವೆ ಸಮನ್ವಯತೆಗೆ ಯಾವ ಕ್ರಮವಹಿಸಲಾಗಿದೆ ;

(ಈ) ರೈತರು ಸರ್ವೆ ಸಮಸ್ಯೆಯಿಂದ ದಿನವಿಡೀ ಕೆಲಸ ಕಾರ್ಯಗಳನ್ನು ಬಿಟ್ಟು ಕಾಯಬೇಕಾದ ಹಿನ್ನಲೆಯಲ್ಲಿ ಮತ್ತು ಗ್ರಾಮೀಣ ಪ್ರದೇಶದ ಜನತೆಯ ಕನಿಷ್ಠ ಅಗತ್ಯವಾದ ಆರ್.ಟಿ.ಸಿ. ಪಡೆಯಲು ಕೂಡಾ ಸಾಧ್ಯವಾಗದಿರುವ ಹಿನ್ನಲೆಯಲ್ಲಿ ರೈತರು ಖಾಸಗಿ ಸೈಬರ್ ಸೆಂಟರ್‌ಗಳಲ್ಲಿ ದುಪ್ಪಟ್ಟು ಬೆಲೆ ನೀಡಿ ಆರ್.ಟಿ.ಸಿ ಖರೀದಿಸುತ್ತಿದ್ದು ಈ ಬಾಪೂಜಿ ಸೇವಾ ಕೇಂದ್ರಗಳು ಜನರಿಂದ ದೂರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ಕ್ರಮವೇನು ?

## ೨೦೧೯-೨೦ರಲ್ಲಿ ರಾಜ್ಯ ಖಜಾನೆಯಲ್ಲಿ ಗದಗ, ಹಾವೇರಿ, ಧಾರವಾಡ ಜಿಲ್ಲೆಗಳ ಬಾಕಿ ಉಳಿದಿರುವ ಅನುದಾನದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೪ (೮೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ಕಾರಣಾಂತರಗಳಿಂದ ರಾಜ್ಯ ಖಜಾನೆಯು ಬೇಗ ಮುಚ್ಚಲ್ಪಟ್ಟಿದ್ದರಿಂದ, ಗದಗ, ಹಾವೇರಿ, ಹಾಗೂ ಧಾರವಾಡ ಜಿಲ್ಲೆಗಳ, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳ ಒಟ್ಟು ಎಷ್ಟು ಅನುದಾನ ಬಾಕಿ ಉಳಿದಿದೆ ;

(ಆ) ೨೦೧೯-೨೦ನೇ ಸಾಲಿನಲ್ಲಿ ರಾಜ್ಯ ಖಜಾನೆಯು ನಿಗದಿತ ಸಮಯಕ್ಕಿಂತ ಮೊದಲು ಬಂದ್ ಆಗಲು ಕಾರಣಗಳೇನು ;

(ಇ) ಬಾಕಿ ಉಳಿದಿರುವ ಅನುದಾನ ಪುನಃ ; ಬಿಡುಗಡೆಗೊಳಿಸಲಾಗುವುದೇ ; ಬಾಕಿ ಅನುದಾನ ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಬಗ್ಗೆ

**ಡಾ ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೫ (೬೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಗಳು ಯಾವುವು; (ವಿವರ ನೀಡುವುದು)

(ಆ) ಇದರಲ್ಲಿ ಪೂರ್ಣಗೊಂಡ ಯೋಜನೆಗಳು ಯಾವುವು; ಯೋಜನೆಯ ವೆಚ್ಚ ಎಷ್ಟು; (ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಒಳಗೊಂಡಿರುವ ಗ್ರಾಮಗಳು ಯಾವುವು; (ವಿವರ ನೀಡುವುದು)

(ಈ) ಈ ಯೋಜನೆಯ ಅನುಷ್ಠಾನದಿಂದ ಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ಪರಿಹಾರವಾಗಿದೆಯೇ?

## ಜಲಾಮೃತ ಯೋಜನೆಯ ಬಗ್ಗೆ

**ಡಾ ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೬ (೮೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಲಾಮೃತ ಯೋಜನೆಯು ಪ್ರಾರಂಭಗೊಂಡಿದ್ದು ಯಾವಾಗ ;

(ಆ) ಈ ಯೋಜನೆಗಾಗಿ ಇದುವರೆವಿಗೆ ಮೀಸಲಿರಿಸಿದ ಅನುದಾನ ಎಷ್ಟು; ಹಾಗೂ ಎಷ್ಟು ಅನುದಾನ ವಿನಿಯೋಗಿಸಲಾಗಿದೆ;

(ಇ) ಈ ಯೋಜನೆಯ ಉದ್ದೇಶಗಳೇನು;

(ಈ) ಇದುವರೆವಿಗೆ ಎಷ್ಟು ಕೆರೆ, ಕಟ್ಟೆಗಳನ್ನು ಈ ಯೋಜನೆಯಡಿ ನಿರ್ಮಿಸಲಾಗಿದೆ; ಎಷ್ಟು ಕೆರೆ, ಕಟ್ಟಡಗಳನ್ನು ದುರಸ್ತಿ ಮಾಡಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

## ೨೦೨೦–೨೧ನೇ ಸಾಲಿನ ಅಂಧ ತಾಯಂದಿಯರಿಗೆ ಸಹಾಯಧನ ನೀಡುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೫೭ (೭೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಅಂಧ ತಾಯಿಂದಿರಿಗೆ ಮಾಸಿಕ ೨೦೦೦ ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ಸರ್ಕಾರವು ಮಗುವಿನ ಮೊದಲು ಎರಡು ವರ್ಷದವರೆಗೆ ನೀಡುತ್ತಿದ್ದು. ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು ಘೋಷಿಸಿದ್ದು, ಇದು ಅನುಷ್ಠಾನದಲ್ಲಿದೆಯೇ;

(ಆ) ಅನುಷ್ಠಾನಕ್ಕೆ ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ವಿತರಿಸಲಾಗಿದೆ;

(ಇ) ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಜಾನುವಾರುಗಳಿಗೆ ಮೇವಿನ ಕೊರತೆ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೮ (೭೫೯) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾನುವಾರುಗಳಿಗೆ ಮೇವಿನ ಅಭಾವ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮೇವಿನ ಅಭಾವ ನೀಗಿಸಲು ಸರ್ಕಾರವು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ?

## ೨೦೧೮–೧೯ನೇ ಸಾಲಿನಲ್ಲಿನ ಆಯವ್ಯಯದ ಕಾರ್ಯಕ್ರಮಗಳ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೯ (೭೬೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಆಯವ್ಯಯದಲ್ಲಿ ಮಂಡಿಸಿರುವಂತೆ ಪ್ರವಾಸೋದ್ಯಮ ವಲಯದ ಆತಿಥ್ಯ ಕ್ಷೇತ್ರದಲ್ಲಿ ಉದ್ಯೋಗಾ–ವಕಾಶಗಳನ್ನು ಸೃಜಿಸಲು ಕೌಶಲ್ಯಾಭಿವೃದ್ಧಿ, ಪ್ರವಾಸಿ ಮಾರ್ಗದರ್ಶಿ

ತರಬೇತಿ ಕಾರ್ಯಕ್ರಮ ಹಾಗೂ ಪ್ರವಾಸಿ ಟ್ಯಾಕ್ಸಿ ಚಾಲಕರಿಗೆ ರಿಫ್ರೆಷರ್ ಕೋರ್ಸ್‌ಗಳ ಮೂಲಕ ತರಬೇತಿ ನೀಡಲು ಉದ್ದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸೌಲಭ್ಯಗಳನ್ನು ಅನುಷ್ಠಾನಕ್ಕೆ ತರಲಾಗಿದೆಯೇ;

(ಇ) ಈ ಸೌಲಭ್ಯ ಇನ್ನೂವರೆಗೂ ಅನುಷ್ಠಾನಕ್ಕೆ ತರದೆ ಇದ್ದಲ್ಲಿ, ಯಾವಾಗಿನಿಂದ ಜಾರಿಗೆ ತರಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಚಿತ್ತರಗಿಯ ವಿಜಯ ಮಹಾಂತೇಶ ಸ್ವಾಮಿಗಳ ಹುಟ್ಟು ಹಬ್ಬ ಆಚರಣೆ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೦ (೭೫೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ತರಗಿ ಶ್ರೀ ವಿಜಯ ಮಹಾಂತೇಶ ಸಂಸ್ಥಾನದ ಮಠಾಧಿಪತಿ ಲಿಂ. ಶ್ರೀ ಮ.ನಿ.ಪ್ರ.ಡಾ: ಮಹಾಂತಸ್ವಾಮಿಗಳವರ ಹುಟ್ಟು ಹಬ್ಬವನ್ನು ೨೦೧೮ನೇ ಸಾಲಿನಲ್ಲಿ ರೂ. ೯.೦೦ ಲಕ್ಷಗಳ ಅನುದಾನ ಬಿಡುಗಡೆಯೊಂದಿಗೆ ಆಚರಣೆ ಮಾಡಲು ಆದೇಶವಾಗಿದ್ದರೂ ಸಹ ೨೦೧೯, ೨೦೨೦ನೇ ಸಾಲಿನಿಂದ ಆಚರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಎರಡು ವರ್ಷಗಳಿಂದ ಆಚರಣೆ ಮಾಡದೆ ಇರಲು ಕಾರಣಗಳೇನು; ಈ ಬಗ್ಗೆ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ;

(ಇ) ೨೦೨೧ನೇ ಸಾಲಿನಿಂದ ಪ್ರತಿವರ್ಷ ಈ ಕಾರ್ಯಕ್ರಮವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ? (ಸಂಪೂರ್ಣ ವರದಿ ನೀಡುವುದು)

## ಯಾತ್ರ ನಿವಾಸಗಳ ನಿರ್ಮಾಣ ಮತ್ತು ನಿರ್ವಹಣೆಗಳ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೧ (೭೫೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೮ ರಿಂದ ಈ ತಹಲ್‌ವರೆಗೆ ನಿರ್ಮಾಣ ಮಾಡಲಾಗಿರುವ ಯಾತ್ರಿನಿವಾಸಗಳೆಷ್ಟು;

(ಆ) ಸದರಿ ಯಾತ್ರಿ ನಿವಾಸಗಳ ನಿರ್ವಹಣಾ ಹೊಣೆ ಯಾವ ಇಲಾಖೆ ವಹಿಸಕೊಂಡಿದೆ;

(ಇ) ಯಾತ್ರಿ ನಿವಾಸಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು;

(ಈ) ಇದರ ನಿರ್ವಹಣೆಗಾಗಿ ನೇಮಿಸಲಾದ ಸಿಬ್ಬಂದಿಗಳೆಷ್ಟು; ಅವರ ವೇತನಗಳನ್ನು ಪಾವತಿಸಲು ಕೈಗೊಳ್ಳಲಾದ ಕ್ರಮಗಳೇನು?

## “ರೊಳ್ಳಿ” ಗ್ರಾಮದಲ್ಲಿ ಹೊಸ ಗ್ರಾಮ ಪಂಚಾಯಿತಿಯನ್ನು ರಚಿಸುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೬೨ (೬೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸದಾಗಿ ಗ್ರಾಮ ಪಂಚಾಯತಿಗಳನ್ನು ರಚಿಸುವಾಗ ಅನುಸರಿಸುವ ನಿಯಮಗಳೇನು;

(ಆ) ಗ್ರಾಮ ಪಂಚಾಯತಿಗಳ ಪುನರ್ ವಿಂಗಡನೆ ಸಂದರ್ಭದಲ್ಲಿ ರಾಜ್ಯಾದ್ಯಂತ ಎಷ್ಟು ಹೊಸ ಗ್ರಾಮ ಪಂಚಾಯತಿಗಳನ್ನು ರಚಿಸಲಾಗಿದೆ;

(ಇ) ಬೀಳಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಗಲಕೋಟೆ ಜಿಲ್ಲೆಯ “ರೊಳ್ಳಿ’ ಗ್ರಾಮದಲ್ಲಿ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ “ರೊಳ್ಳಿ” ಗ್ರಾಮದಲ್ಲಿ ಇಲ್ಲಿಯವರೆಗೂ ಹೊಸ ಗ್ರಾಮ ಪಂಚಾಯತಿಯನ್ನು ರಚಿಸದೇ ಇರುವುದಕ್ಕೆ ಕಾರಣಗಳೇನು;

(ಉ) “ರೊಳ್ಳಿ” ಗ್ರಾಮದ ಜನರು ಗ್ರಾಮ ಪಂಚಾಯತಿ ಚುನಾವಣೆಯನ್ನು ಬಹಿಷ್ಕರಿಸಿರುವುದನ್ನು ಸರ್ಕಾರ ಗಮನಿಸಿದೆಯೇ;

(ಊ) ಯಾವ ಕಾಲಮಿತಿಯಲ್ಲಿ ಸದರಿ “ರೊಳ್ಳಿ” ಗ್ರಾಮಕ್ಕೆ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಲಾಗುವುದು?

## ೨೦೧೯-೨೦ರ ಸಾರಿಗೆ ಇಲಾಖೆ ಲಾಭ/ನಷ್ಟದ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೩ (೭೭೬) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿಗಳಿಂದ ಆದ ಲಾಭ ಎಷ್ಟು; ನಷ್ಟವಾಗಿದ್ದಲ್ಲಿ ಅದಕ್ಕೆ ಕಾರಣವೇನು; (ಲಾಭ ಹಾಗೂ ನಷ್ಟದ ವಿವರ ನೀಡುವುದು)

(ಆ) ಕೊರೋನ ಲಾಕ್‌ಡೌನ್ ಸಮಯದಲ್ಲಿ ಇಲಾಖೆಯ ನೌಕರರಿಗೆ ಸರಿಯಾಗಿ ಮಾಸಿಕ ಸಂಬಳ ನೀಡಲಾಗಿದೆಯೇ;

(ಇ) ಕೋವಿಡ್ ಲಾಕ್‌ಡೌನ್ ಸಮಯದಲ್ಲಿ ವಲಸೆ ಕಾರ್ಮಿಕರನ್ನು ತಮ್ಮ ತಮ್ಮ ಊರುಗಳಿಗೆ ಕಳುಹಿಸುವಲ್ಲಿ ಸಾರಿಗೆ ಇಲಾಖೆ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ವಿಪಕ್ಷಗಳ ಒತ್ತಾಯದ ಮೇರೆಗೆ ಎಷ್ಟು ವಲಸೆ ಕಾರ್ಮಿಕರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಡಲಾಗಿಯೇ? (ವಿವರ ನೀಡುವುದು)

## ೨೦೧೯-೨೦, ೨೦೨೦-೨೧ರ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಇಲಾಖೆಯ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೪ (೭೭೭) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦, ೨೦೨೦-೨೧ರ ಸಾಲಿನಲ್ಲಿ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಎಷ್ಟು ಹಣ ನಿಗದಿಪಡಿಸಲಾಗಿದೆ;

(ಆ) ಈ ಹಣವನ್ನು ಸಮರ್ಪಕವಾಗಿ ಯಾವ ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ; (ವಿವರ ನೀಡುವುದು)

(ಇ) ೨೦೧೯-೨೦, ೨೦೨೦-೨೧ನೇ ಸಾಲಿನಲ್ಲಿ ಹಜ್ ಪ್ರವಾಸ ಕೈಗೊಳ್ಳಲು ಯಾತ್ರಾರ್ಥಿಗಳನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಅವರುಗಳ ವಿವರ ನೀಡುವುದು?

## ತೃತೀಯ ಲಿಂಗಿಗಳ ಜನಗಣತಿ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೫ (೭೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೃತೀಯ ಲಿಂಗಿಗಳ ಗಣತಿಯನ್ನು ನಡೆಸಲಾಗಿದೆಯೇ; (ಮಾಹಿತಿ ನೀಡುವುದು)

(ಆ) ತೃತೀಯ ಲಿಂಗಿಗಳಿಗೆ ಸಮಾಜದಲ್ಲಿ ಆಗುತ್ತಿರುವ ಕಿರುಕುಳ, ಶೋಷಣೆ, ದೌರ್ಜನ್ಯದ ವಿರುದ್ಧ ರಕ್ಷಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮದ ಮಾಹಿತಿ ಒದಗಿಸುವುದು;

(ಇ) ತೃತೀಯ ಲಿಂಗಿಗಳು ಲಿಂಗತ್ವ ದೃಢೀಕರಣ ಪ್ರಮಾಣ ಪತ್ರ ಪಡೆದುಕೊಳ್ಳಲು ದಂಡಾಧಿಕಾರಿಗಳ/ಮ್ಯಾಜಿಸ್ಟ್ರೇಟ್ ಎದುರು ವಸ್ತ್ರ ಕಳಚಿ ತಪಾಸಣೆಗೊಳಪಡಬೇಕು ಎಂಬ ನಿಯಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ತೃತೀಯ ಲಿಂಗಿಗಳಿಗೆ ಸಮಾನ ನಾಗರೀಕತೆ ಒದಗಿಸಲು ಸಾಮಾಜಿಕ ಘನತೆ ಮತ್ತು ಸಮಾನತೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ತೃತೀಯ ಲಿಂಗಿಗಳಿಗೆ ಉದ್ಯೋಗ, ಸಾಮಾಜಿಕ ಭದ್ರತೆಗಾಗಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಯಾವುದಾದರೂ ನೀತಿ, ನಿಯಮಾವಳಿಗಳನ್ನು ರೂಪಿಸಿದೆಯೇ? (ಮಾಹಿತಿ ಒದಗಿಸುವುದು)

## ಆಶಾ ಕಾರ್ಯಕರ್ತೆಯರ ಸಂಬಳ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೬ (೭೮೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಶಾ ಕಾರ್ಯಕರ್ತೆಯರು ತಮ್ಮ ಅಧಿಕೃತ ಕರ್ತವ್ಯದ ಜೊತೆಯಲ್ಲಿ ಕೊರೋನಾ ವಾರಿಯರ್ಸ್ ಅಗಿ ಕೆಲಸವನ್ನು ಮಾಡುತ್ತಿದ್ದರೂ ಸಹ ಅವರಿಗೆ ಸರಿಯಾಗಿ ಸಂಬಳ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಾರಣವೇನು;

(ಇ) ಕೊರೋನಾ ಸಂದರ್ಭಲ್ಲಿ ಅಂಗನವಾಡಿ ಕಾರ್ಯಕರ್ತರಿಗೆ ಮಾಸಿಕ ಸಂಬಳ ನೀಡಲಾಗಿದೆಯೇ;

(ಈ) ಲಾಕ್ ಡೌನ್ ಸಮಯದಲ್ಲಿ ಅಂಗನವಾಡಿ ಮಕ್ಕಳಿಗೆ ಬಿಸಿ ಊಟದ ವ್ಯವಸ್ಥೆ ಮಾಡಲಾಗಿತ್ತೆ?

## ಪಂಚಾಯತ್ ರಾಜ್ ಇಲಾಖೆಯಿಂದ ವಿಜಯಪುರ ಜಿಲ್ಲೆಗೆ ಮಂಜೂರಾದ ಕಾಮಗಾರಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೬೭ (೭೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ವಿಜಯಪುರ ಜಿಲ್ಲೆಯಲ್ಲಿ ವಿವಿಧ ಯೋಜನೆಯ–ಡಿಯಲ್ಲಿ ಸರ್ಕಾರದಿಂದ ಮಂಜೂರಾದ ಕಾಮಗಾರಿಗಳಾವುವು; (ಸಂಪೂರ್ಣ ವಿವರ ನೀಡುವುದು)

(ಆ) ವಿವಿಧ ಯೋಜನೆಯಡಿಯಲ್ಲಿ ತೆಗೆದುಕೊಂಡ ಭೌತಿಕ ಹಾಗೂ ಆರ್ಥಿಕ ಗುರಿಯೆಷ್ಟು; (ವಿವರ ನೀಡುವುದು)

(ಇ) ಇಲ್ಲಿಯವರೆಗೆ ವಿವಿಧ ಶೀರ್ಷಿಕೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ; ಎಷ್ಟು ಖರ್ಚಾಗಿದೆ; ಗುತ್ತಿಗೆದಾರರಿಗೆ ನೀಡಬೇಕಾದ ಬಾಕಿ ಎಷ್ಟು? (ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೬೮ (೭೪೧) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮಂಜೂರಾದ ಅನುದಾನ

ಎಷ್ಟು; ಆ ಪೈಕಿ ಬಿಡುಗಡೆಯಾದ ಅನುದಾನ ಎಷ್ಟು; (ವಿಜಯಪುರ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಿಜಯಪುರ ಜಿಲ್ಲೆಗೆ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಪೂರ್ಣವಾಗದೇ ಇರುವ ಕಾಮಗಾರಿಗಳಾವುವು ಹಾಗೂ ಪೂರ್ಣವಾಗದೆ ಇರಲು ಕಾರಣಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕದ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೬೯ (೭೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಘಟಕ ಆರಂಭಿಸಲಾಗಿದೆ;

(ಆ) ಹಾಲಿ ಕಾರ್ಯ ನಿರ್ವಹಿಸುತ್ತಿರುವ ನೀರಿನ ಘಟಕಗಳೆಷ್ಟು;

(ಇ) ದುರಸ್ತಿಯಲ್ಲಿರುವ ಘಟಕಗಳು ಹಾಗೂ ಹೊಸದಾಗಿ ಪ್ರಾರಂಭಿಸಬೇಕಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೭೦ (೭೪೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಪ್ರವಾಸಿ ತಾಣಗಳಿವೆ ;

(ಆ) ಈ ಎಲ್ಲಾ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಪ್ರವಾಸಿ ತಾಣಗಳಲ್ಲಿ ಪ್ರವಾಸಿ ಮಂದಿರ ಹಾಗೂ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಲು ಬಿಡುಗಡೆ ಮಾಡಲಾದ ಅನುದಾನ ಎಷ್ಟು ? (ವಿವರ ನೀಡುವುದು)

## ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡಾಪಟ್ಟುಗಳಿಗೆ ನೀಡುವ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೭೧ (೭೪೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡೆಗಳಲ್ಲಿ ಪದಕಗಳನ್ನು ಗೆದ್ದಿರುವ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ನೀಡಿರುವ ಸೌಲಭ್ಯ ಹಾಗೂ ನಗದು ಬಹುಮಾನಗಳ ವಿವರ ನೀಡುವುದು;

(ಆ) ಈ ಕ್ರೀಡಾಪಟುಗಳಿಗೆ ಅವರ ವಿದ್ಯಾರ್ಹತೆಗೆ ಅನುಗುಣವಾಗಿ ಸರ್ಕಾರದಲ್ಲಿ ಉದ್ಯೋಗ ಕಲ್ಪಿಸಿಕೊಡಲಾಗುತ್ತದೆಯೇ ;

(ಇ) ಯಾವ ಯಾವ ಕ್ರೀಡಾಪಟುಗಳಿಗೆ ಬಿ.ಡಿ.ಎ. ಅಥವಾ ಇನ್ನಿತರ ಸಂಸ್ಥೆಗಳಿಂದ ನಿವೇಶನ ನೀಡಲಾಗಿದೆ ? (ವಿವರ ನೀಡುವುದು)

## ರಾಜ್ಯದ ಕಲಾ ಸಂಘಗಳಿಗೆ ಮತ್ತು ಹೊರ ನಾಡಿನ ಸಂಘ ಸಂಸ್ಥೆಗಳಿಗೆ ಸರ್ಕಾರ ನೀಡುವ ವಾರ್ಷಿಕ ಅನುದಾನ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೨ (೪೯೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕಲಾ ಸಂಘ ಮತ್ತು ಹೊರ ನಾಡಿನ ಸಂಘ ಸಂಸ್ಥೆಗೆ ಸರ್ಕಾರ ನೀಡುವ ವಾರ್ಷಿಕ ಅನುದಾನವೆಷ್ಟು ;

(ಆ) ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕಲಾ ಸಂಘಗಳಿಗೆ ಸರ್ಕಾರದಿಂದ ನೀಡುವ ಅನುದಾನವೆಷ್ಟು ;

(ಇ) ಕಳೆದ ಕೆಲವು ವರ್ಷಗಳಿಂದ ಕಲಾವಿದರುಗಳು ಆನ್‌ಲೈನ್ ಮುಖಾಂತರ ನಿಯಮಾನುಸಾರ ಅರ್ಜಿ ಸಲ್ಲಿಸಿದ್ದರೂ ಕಲಾವಿದರು ಮತ್ತು ಕಲಾ ಸಂಸ್ಥೆಗಳಿಗೆ ವರ್ಷ ಮುಗಿದರೂ ಅವರ ಖಾತೆಗೆ ಹಣ ಜಮೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಧನ ಸಹಾಯ ಮಂಜೂರಾತಿ ಸಮಿತಿಯನ್ನು ರಚಿಸಲಾಗಿದೆಯೇ ; ಹಾಗಿದ್ದಲ್ಲಿ, ಸಮಿತಿಯಲ್ಲಿರುವ ಅಧ್ಯಕ್ಷರು ಮತ್ತು ಸದಸ್ಯರ ವಿವರ ನೀಡುವುದು?

## ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೩ (೯೫೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪ್ರವಾಸಿತಾಣಗಳ ವಿವರ ನೀಡುವುದು ;

(ಇ) ೨೦೨೦–೨೧ನೇ ಸಾಲಿನಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪ್ರವಾಸಿತಾಣಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ವಿವರ ನೀಡುವುದು ;

(ಈ) ಶಿವಮೊಗ್ಗ ಜಿಲ್ಲೆಯ ಜೋಗ ಜಲಪಾತ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ವಾಯುಮಾಲಿನ್ಯ ತಡೆಗಟ್ಟಲು ಎಲೆಕ್ಟ್ರಿಕ್ ಬಸ್‌ಗಳ ಖರೀದಿ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೪ (೭೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಾಯು ಮಾಲಿನ್ಯ ತಡೆಗಟ್ಟುವ ದೃಷ್ಟಿಯಿಂದ ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ./ಬಿ.ಎಂ.ಟಿ.ಸಿ.ಗೆ ಗುತ್ತಿಗೆ ಆಧಾರದ ಮೇಲೆ ಅಥವಾ ಖರೀದಿಗೆ ತೆಗೆದುಕೊಳ್ಳಲು ಸರ್ಕಾರ ತೀರ್ಮಾನ ಕೈಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ ; ವಿಳಂಬವಾಗಲು ಕಾರಣಗಳೇನು ;

(ಇ) ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರ ಸಹಾಯಧನ ನೀಡಿದ್ದರೂ ಸಹ ಈ ಯೋಜನೆಯನ್ನು ಬಳಸಿಕೊಳ್ಳದೆ ವಿಳಂಬ ಧೋರಣೆಯಿಂದ ಕೇಂದ್ರ ಸರ್ಕಾರದ ಸಹಾಯಧನ ನಿಂತುಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ವಿಳಂಬ ಧೋರಣೆಗೆ ಕಾರಣರಾದ ಅಧಿಕಾರಿಗಳು ಯಾರು; ಆ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬಾಗಿಲು ಮುಚ್ಚಿದ ಶುದ್ಧ ನೀರಿನ ಘಟಕಗಳು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೫ (೭೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಾರಂಭದಿಂದ ಇದುವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ವರ್ಷವಾರು, ಜಿಲ್ಲಾವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಈ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕೆ ಸರ್ಕಾರ ಇದುವರೆಗೂ ಖರ್ಚು ಮಾಡಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿ ಕುಡಿಯುವ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದಾಗ್ಯೂ ಅವುಗಳನ್ನು ಅಧಿಕಾರಿಗಳು ಸರಿಯಾದ ರೀತಿಯಲ್ಲಿ ನಿರ್ವಹಿಸದೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ನಿರ್ಮಾಣ ಮಾಡಲಾದ ಈ ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳಲಾಗುವುದು ; (ಮಾಹಿತಿ ಒದಗಿಸುವುದು)

(ಉ) ಸ್ಥಾಪನೆಯಾದ ದಿನದಿಂದ ಶುದ್ಧ ನೀರಿನ ಘಟಕಗಳು ಇದುವರೆಗೂ ಕಾರ್ಯಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿ ಕಾರ್ಯಾರಂಭ ಮಾಡಿರುವ ಘಟಕಗಳು ರಾಜ್ಯಾದ್ಯಂತ ಎಷ್ಟಿವೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಭಾಗ್ಯಲಕ್ಷ್ಮಿ ಯೋಜನೆಯ ಅನುಷ್ಠಾನ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೬ (೭೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಸರ್ಕಾರ ಒದಗಿಸಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯೋಜನೆಯ ಫಲಾನುಭವಿಗಳನ್ನು ಗುರುತಿಸಲು ನಿಗಧಿಪಡಿಸಿರುವ ನಿಯಮಗಳಲ್ಲಿ ಬದಲಾವಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಭಾಗ್ಯಲಕ್ಷ್ಮಿ ಯೋಜನೆ ಜಾರಿಗಾಗಿ ಮೂರು ವರ್ಷಗಳಲ್ಲಿ ಮೀಸಲಿಟ್ಟ ಮತ್ತು ವೆಚ್ಚ ಮಾಡಿದ ಮೊತ್ತ ಎಷ್ಟು ? (ಮಾಹಿತಿ ನೀಡುವುದು)

## ಆಹಾರ ಪೂರೈಕೆಯ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೭ (೭೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ೨೦೧೭–೧೮ರಿಂದ ೨೦೧೯–೨೦ನೇ ಸಾಲಿನವರೆಗೆ ಅಂಗನವಾಡಿ ಮಕ್ಕಳಿಗೆ ಬಾಣಂತಿಯರಿಗೆ ಗರ್ಭಿಣಿಯರಿಗೆ ನೀಡುವ ಆಹಾರ ಪೂರೈಕೆ ಕುರಿತು ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅನುದಾನವನ್ನು ಸಮರ್ಪಕವಾಗಿ ಉಪಯೋಗಿಸಿ ಕೊಳ್ಳಲಾಗಿದೆಯೇ ;

(ಇ) ಆಹಾರ ಪೂರೈಕೆಯನ್ನು ಯಾವ ಯಾವ ಏಜೆನ್ಸಿಯವರಿಗೆ ಗುತ್ತಿಗೆ ನೀಡಲಾಗಿದೆ ; ಗುತ್ತಿಗೆಯ ಕರಾರುಗಳೇನು ; (ಮಾಹಿತಿ ನೀಡುವುದು)

(ಈ) ಆಹಾರ ಪದಾರ್ಥಗಳನ್ನು ಖರೀದಿಸಲು ಇರುವ ಮಾನದಂಡಗಳೇನು ಹಾಗೂ ನಿಯಮಗಳೇನು ; ಖರೀದಿಸಿರುವ ಪ್ರಕರಣಗಳೇನಾದರೂ ಬೆಳಕಿಗೆ ಬಂದಿವೆಯೇ ; ಬಂದಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿನ ಪ್ರವಾಸೋದ್ಯಮ ಪುನಶ್ಚೇತನ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೮ (೭೫೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ಕಾರಣದಿಂದಾಗಿ ಸಂಪೂರ್ಣವಾಗಿ ಕುಸಿತ ಕಂಡಿರುವ ರಾಜ್ಯದ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಆ) ೧೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಜೋಗ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲು ಸರ್ಕಾರ ಅನುಮೋದನೆ ನೀಡಿದೆಯೇ ; ನೀಡಿದ್ದರೆ, ಈಗಾಗಲೇ ಅಭಿವೃದ್ಧಿಯಾಗಿರುವ ಜೋಗದ ಪುನರಾಭಿವೃದ್ಧಿಗೆ ಇಷ್ಟು ಹಣ ಮೀಸಲಿಡಲು ಕಾರಣ ಏನು ;

(ಇ) ಧಾರ್ಮಿಕ ಪ್ರವಾಸೋದ್ಯಮ, ಇಕೋ ಟೂರಿಸಂ ಮತ್ತು ರಾಜ್ಯದ ಕರಾವಳಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮ ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಈ) ವಿದೇಶಿ ಪ್ರವಾಸಿಗರನ್ನು ಮತ್ತೆ ಆಕರ್ಷಿಸಲು ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ಯಾವ ಹೊಸ ಯೋಜನೆ ರೂಪಿಸಲಿದೆ ? (ವಿವರ ನೀಡುವುದು)

## ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಶ್ವವಿದ್ಯಾಲಯಗಳಲ್ಲಿ ಮಾನ್ಯ ಶಾಸಕರುಗಳ ನಾಮನಿರ್ದೇಶನ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೯ (೭೫೫) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೫ರಲ್ಲಿ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಿಗರ ವಿಶ್ವವಿದ್ಯಾಲಯ, ಪ್ರಾರಂಭವಾಗಿದ್ದರೂ ಸಹ ಬೋರ್ಡ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡಲು ಅವಕಾಶ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಾನ್ಯ ಶಾಸಕರುಗಳನ್ನು ನಾಮ ನಿರ್ದೇಶನ ಮಾಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಮಂಗಳೂರು ಮೀನುಗಾರಿಕೆ ಮಹಾ ವಿದ್ಯಾಲಯಗಳಲ್ಲಿ AICRP ಯೋಜನೆಯಡಿ ಅನುಷ್ಠಾನದಲ್ಲಿ ಆಗಿರುವ ಲೋಪದೋಷಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಲೋಕಸಭೆ ಚುನಾವಣೆಯ ಮಾದರಿ ನೀತಿ ಸಂಹಿತೆ ಇದ್ದಾಗಲೂ ಸಹ ಪತ್ರಿಕೆ ಪ್ರಕಟಣೆ ನೀಡದೆ ೨೦೧೯ರಲ್ಲಿ AICRP ಯೋಜನೆಯಡಿ ನಿಯಮಬಾಹಿರವಾಗಿ ವಿಜ್ಞಾನಿ ತಾಂತ್ರಿಕ ಸಿಬ್ಬಂದಿ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಯೋಜನೆಯಡಿ ನೇಮಕವಾದ Contractual ಸಿಬ್ಬಂದಿಗಳಿಗೆ ಕೆ.ಸಿ.ಎಸ್.ಆರ್. ಹಾಗೂ ಕೆ.ಎಫ್.ಸಿ. ನಿಯಮಗಳ ವಿರುದ್ಧವಾಗಿ ವಾರ್ಷಿಕ ವೇತನ ಬಡ್ತಿ, ಖಾಯಂ ನೌಕರರಂತೆ ವೇತನ ಶ್ರೇಣಿ

ಹಾಗೂ ಕಾರ್ಮಿಕ ಕಾಯ್ದೆಯಂತೆ ೧೭೯ ದಿನಗಳಿಗೆ ಕೆಲಸ ಮಿತಿಗೊಳಿಸದಿರುವವರ ವಿರುದ್ಧ ಯಾವ ಕ್ರಮ ತೆಗೆದು ಕೈಗೊಳ್ಳಲಾಗುವುದು ?

## ರಾಜ್ಯದ ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೦ (೭೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ರಾಜ್ಯಾದ್ಯಂತ ಬಿಡುಗಡೆಯಾದ ಅನುದಾನಗಳೆಷ್ಟು ; ಖರ್ಚಾದ ಹಣವೆಷ್ಟು ; ಆದ ಕೆಲಸಗಳಾವುವು ; (ಜಿಲ್ಲಾವಾರು ಹಾಗೂ ಜಿಲ್ಲಾ ಪಂಚಾಯತವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದೆರಡು ವರ್ಷಗಳಿಂದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಆದ ಕೆಲಸಗಳಾವುವು ; ಎಷ್ಟು ಮಾನವ ದಿನಗಳ ಕೆಲಸ ಆಗಿದೆ ; (ಅಂಕಿ ಅಂಶ ಸಹಿತ ವಿವರ ನೀಡುವುದು)

(ಈ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ ?

# ಕೊರೋನಾ ವೈರಸ್ ಸಂಕಷ್ಟದಿಂದ ಕೈಮಗ್ಗ ಜವಳಿ ನೇಕಾರರ ಹೀನಾಯ ಸ್ಥಿತಿ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೧ (೭೫೧) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊರೋನಾ ವೈರಸ್ ಸಂಕಷ್ಟದಿಂದ ಕೈಮಗ್ಗ, ನೇಕಾರಿಕೆ ಮತ್ತು ಜವಳಿ ಉದ್ಯಮ ಅತ್ಯಂತ ಹೀನಾಯ ಸ್ಥಿತಿ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಚೇತರಿಕೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ರಾಜ್ಯದಲ್ಲಿ ಗ್ರಾಮೀಣ ನೇಕಾರರು ಆರ್ಥಿಕ ಸಂಕಷ್ಟ ತಾಳಲಾರದೇ ತಮ್ಮ ಕೈಮಗ್ಗಗಳಿಗೆ ನೇಣು ಹಾಕಿಕೊಂಡು ಸಾವನ್ನಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅತಂತ್ರ ಸ್ಥಿತಿಯಲ್ಲಿರುವ ನೇಕಾರರ ಬದುಕು ಸುಧಾರಿಸಲು ಯಾವ ಕಾರ್ಯಕ್ರಮ ರೂಪಿಸಲಾಗಿದೆ ;

(ಇ) ರಾಜ್ಯದ ಜವಳಿ ಉದ್ಯಮದ ಚೇತರಿಕೆಗೆ ಈವರೆಗೆ ಮೀಸಲಿಟ್ಟ ಹಣವೆಷ್ಟು ; ಖರ್ಚಾದ ಹಣವೆಷ್ಟು ;

(ಈ) ಗ್ರಾಮೀಣ ನೇಕಾರರ ಉತ್ತೇಜನಕ್ಕೆ ಸರ್ಕಾರ ಆರ್ಥಿಕ ನೆರವಿನ ಪ್ಯಾಕೇಜ್ ಘೋಷಿಸಲಿದೆಯೇ ? (ವಿವರ ನೀಡುವುದು)

# ಲಾಕ್‌ಡೌನ್ ಪ್ರಕ್ರಿಯೆಯಿಂದ ರಾಜ್ಯದ ಟ್ಯಾಕ್ಸಿ ಮತ್ತು ಆಟೋ ಚಾಲಕರ ಕುಟುಂಬಗಳಿಗೆ ಆದ ನಷ್ಟದ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೮೨ (೭೮೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಕರೋನ ಮಹಾಮಾರಿ ಹಿನ್ನೆಲೆಯಲ್ಲಿ ರಾಜ್ಯದ ಹಲವಾರು ಟ್ಯಾಕ್ಸಿ ಚಾಲಕರು ಮತ್ತು ಆಟೋ ಚಾಲಕರು ಲಾಕ್ ಡೌನ್ ಪ್ರಕ್ರಿಯೆಯಿಂದ ನಷ್ಟಕ್ಕೊಳಗಾಗಿ ತಮ್ಮ ಕುಟುಂಬದ ದೈನಂದಿನ ಜೀವನ ನಿರ್ವಹಿಸಲು ಸಾಧ್ಯವಾಗದೆ ನಗರಗಳನ್ನು ತೊರೆದು ತಮ್ಮ ಹಳ್ಳಿಗಳಿಗೆ ವಾಪಸ್ ಹೋಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಸರ್ಕಾರದಿಂದ ಈ ವರ್ಗಕ್ಕೆ ಯಾವುದಾದರೂ ಪರಿಹಾರ ಧನ ನೀಡಲಾಗಿದೆಯೇ ; ನೀಡಿದ್ದಲ್ಲಿ ವಿವರ ನೀಡುವುದು;

(ಇ) ಎಷ್ಟು ಚಾಲಕರಿಗೆ ಮತ್ತು ಎಷ್ಟು ಮೊತ್ತದ ಪರಿಹಾರ ಧನ ನೀಡಲಾಗಿದೆ; (ವರ್ಗವಾರು ವಿವರ ನೀಡುವುದು)

(ಈ) ಪರಿಹಾರ ಧನವನ್ನು ವಿತರಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ವಲಸೆ ಹೋಗಿರುವ ಈ ವರ್ಗದ ಕುಟುಂಬಗಳನ್ನು ಮರಳಿ ವಾಪಸ್ ಕರೆತರಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ರಾಜ್ಯದ ಸಾರಿಗೆ ಸಂಸ್ಥೆಗಳು ಸಂಕಷ್ಟದಲ್ಲಿರುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೮೩ (೭೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಕರೋನ ಮಹಾಮಾರಿ ಹಿನ್ನೆಲೆಯಲ್ಲಿ ರಾಜ್ಯದ ಸಾರಿಗೆ ಸಂಸ್ಥೆಗಳ ವಾರ್ಷಿಕ ಆದಾಯ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ವಲಯವಾರು ಕಳೆದ ೫ ವರ್ಷಗಳ ಅಂದಾಜಿಸಿದ ಮತ್ತು ಸಂದಾಯವಾದ ಆದಾಯದ ವಿವರ ನೀಡುವುದು ;

(ಇ) ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆಗೆ ಅಂದಾಜು ಮಾಡಿದ ಆದಾಯ ಮತ್ತು ಸಂದಾಯವಾದ ವಲಯವಾರು ಆದಾಯದ ವಿವರ ನೀಡುವುದು ;

(ಈ) ಸಾರಿಗೆ ಸಂಸ್ಥೆಗಳ ನೌಕರರ ಭವಿಷ್ಯದ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೮೪ (೭೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೦ನೇ ಸಾಲಿನಿಂದ ಇಲ್ಲಿಯವರೆಗೆ ಪಂಚಾಯತಿ ಅಭಿವೃದ್ಧಿಗೆ ಅಧಿಕಾರಿಗಳಿಗೆ ಬಡ್ತಿ ನೀಡಲಾಗಿದೆಯೇ ; ನೀಡಿದ್ದಲ್ಲಿ ಯಾವ ಜೇಷ್ಠತಾ ಪಟ್ಟಿಯ ಆಧಾರದಲ್ಲಿ ಬಡ್ತಿ ನೀಡಲಾಗಿದೆ ; ಎಷ್ಟು ಅಧಿಕಾರಿಗಳಿಗೆ ಬಡ್ತಿ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರಸ್ತುತ ಪಂಚಾಯತಿ ಅಭಿವೃದ್ದಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ರದ್ದುಗೊಳಿಸಿ, ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ನಿಯಮಾನುಸಾರ ತಯಾರಿಸುವಂತೆ ಯಾವುದಾದರೂ ನ್ಯಾಯಾಲಯ ಆದೇಶಿಸಿದೆಯೇ ; ಆದೇಶಿಸಿದಲ್ಲಿ ನ್ಯಾಯಾಲಯದ ಆದೇಶದ ವಿವರಗಳನ್ನು ನೀಡುವುದು ;

(ಇ) ರದ್ದಾಗುವ ಮುನ್ನ ಮೂಲ ಜೇಷ್ಠತಾ ಪಟ್ಟಿಯನ್ನು ಆಧರಿಸಿ ಬಡ್ತಿ ಪಡೆದ ಅಧಿಕಾರಿಗಳ ಪ್ರಸ್ತುತ ಹುದ್ದೆಗಳ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಈ) ಜೇಷ್ಠತಾ ಪಟ್ಟಿ ನಿಯಮಾನುಸಾರ ತಯಾರಿಸಿ, ನ್ಯಾಯಾಲಯಕ್ಕೆ ಸಲ್ಲಿಸಲು ಸರ್ಕಾರಕ್ಕೆ ಇರುವ ತೊಡಕುಗಳೇನು ; ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಅಸ್ತಿತ್ವಕ್ಕೆ ತರಲು ಆಗಿರುವ ವಿಳಂಬಕ್ಕೆ ಕಾರಣಗಳೇನು ; ಮತ್ತು ಇದನ್ನು ಕಾಲಮಿತಿಯಲ್ಲಿ ಸರಿಪಡಿಸಲು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಉ) ಜೇಷ್ಠತಾ ಪಟ್ಟಿ ನಿಯಮಾನುಸಾರ ತಯಾರಿಸಿ, ಇಲಾಖೆಯ ವೃಂದದಲ್ಲಿ ಖಾಲಿಯಿರುವ ಸ್ಥಾನಗಳಿಗೆ ಬಡ್ತಿ ನೀಡಲು ಎಷ್ಟು ಕಾಲಾವಕಾಶ ಅಗತ್ಯವಿದೆ ?

## ರಸ್ತೆಗಳ ದುಸ್ಥಿತಿ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೮೫ (೭೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ತುಮಕೂರು ರಸ್ತೆ ಮಾದನಾಯಕನಹಳ್ಳಿ ಗ್ರಾಮದಿಂದ ಕುದುರೆಗೆರೆ, ಸಾಸವೆಘಟ್ಟ, ಕುಂಬಾರಹಳ್ಳಿ ಮುಖಾಂತರ ಹಾದು ಹೋಗಿ ಹೆಸರಘಟ್ಟ ಸಂಪರ್ಕ ಕಲ್ಪಿಸುವ ರಸ್ತೆಯು ಮತ್ತು ಬೆಂಗಳೂರು ನಗರದ ಕಡಬಗೆರೆ ಗ್ರಾಮದಿಂದ ಲಕ್ಷ್ಮೀಪುರ, ಬಿನ್ನಮಂಗಲ, ವಡ್ಡರಹಳ್ಳಿ ಮುಖಾಂತರ ಹಾದು ಹೋಗಿ ಮಾದನಾಯಕನಹಳ್ಳಿ–ತುಮಕೂರು ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಯು ಹಾಳಾಗಿ ಸಾರ್ವಜನಿಕ ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಸದರಿ ರಸ್ತೆಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ವತಿಯಿಂದ ಕಳೆದ ಹತ್ತು ವರ್ಷಗಳಲ್ಲಿ ಡಾಂಬರೀಕರಣ / ಕಾಂಕ್ರೀಟ್‌ಕರಣ ಮಾಡಿದ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸದರಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಆಶಾ ಕಾರ್ಯಕರ್ತರ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೬ (೭೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸರ್ಕಾರದ ವತಿಯಿಂದ ಇವರಿಗೆ ನೀಡುತ್ತಿರುವ ಸವಲತ್ತುಗಳೇನು ; (ಮಾಹಿತಿ ಒದಗಿಸುವುದು)

(ಇ) ಕೋವಿಡ್–೧೯ ಸಮಯದಲ್ಲಿ ಆಶಾ ಕಾರ್ಯಕರ್ತರಿಗೆ ಸಂಬಳ ಸಮರ್ಪಕವಾಗಿ ವಿತರಣೆ ಆಗಿದೆಯೇ ; ಇಲ್ಲವಾದಲ್ಲಿ ಅದರ ಬಿಡುಗಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೭ (೭೦೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿದ ಅನುದಾನ ಎಷ್ಟು ; ಇದರಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗೆ ಅಲ್ಪಸಂಖ್ಯಾತರ ಇಲಾಖೆಯಿಂದ ನೀಡಲಾದ ಅನುದಾನ ಎಷ್ಟು ; ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳೇನು ? (ಮಾಹಿತಿ ಒದಗಿಸುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯಿಂದ ಅನುಷ್ಠಾನಗೊಂಡಿರುವ ವಿವಿಧ ಕಲ್ಯಾಣ ಕಾರ್ಯಕ್ರಮಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಚಿತ್ರದುರ್ಗ, ದಾವಣಗೆರೆ ಗ್ರಾಮ ಪಂಚಾಯತ್ ಕಟ್ಟಡಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೮ (೭೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಗ್ರಾಮ ಪಂಚಾಯತ್ ಗ್ರಂಥಾಲಯಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೯ (೭೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗೆ ಬರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇವುಗಳ ನಿರ್ವಹಣೆಗೆ ಸರ್ಕಾರದ ವತಿಯಿಂದ ವಾರ್ಷಿಕ ಬಿಡುಗಡೆ ಆಗುತ್ತಿರುವ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಪ್ರತಿ ಗ್ರಾಮ ಪಂಚಾಯಿತಿಗೆ ವಾರ್ಷಿಕ ಪುಸ್ತಕ ಖರೀದಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ,

ಬಿಡುಗಡೆಯಾಗುತ್ತಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಈ) ಗ್ರಾಮ ಪಂಚಾಯ್ತಿಗಳ ಗ್ರಂಥಾಲಯ ಬಲವರ್ಧನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಗ್ರಾಮಠಾಣಾ ವ್ಯಾಪ್ತಿ ಮೀರಿ ಕಟ್ಟಡಗಳು ನಿರ್ಮಾಣವಾಗಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೬೮೦ (೬೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜನಸಂಖ್ಯಾ ಹೆಚ್ಚಳದಿಂದಾಗಿ ಗ್ರಾಮೀಣ ಭಾಗದ ಘೋಷಿತ ಗ್ರಾಮಠಾಣಾ ಪ್ರದೇಶ ವ್ಯಾಪ್ತಿ ಮೀರಿ ಕಟ್ಟಡಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮಠಾಣಾ ವ್ಯಾಪ್ತಿಯ ಹೊರಗೆ ನಿರ್ಮಾಣ ಮಾಡಿಕೊಂಡಿರುವ ಕೃಷಿ ಭೂಮಿಯ ಅಘೋಷಿತ ಪಾರಂಪರಿಕ ವಿಸ್ತೃತ ಗ್ರಾಮಠಾಣಾ ಕಟ್ಟಡಗಳಿಗೆ ಯಾವುದೇ ಸಾರ್ವಜನಿಕ ಸೌಲಭ್ಯಗಳು ಸಿಗದೆ, ಗ್ರಾಮೀಣ ಜನತೆ ವಂಚಿತರಾಗುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

(ಇ) ಈಗಾಗಲೇ ನಿರ್ಮಾಣ ಮಾಡಿಕೊಂಡಿರುವ ಪಾರಂಪರಿಕ ಕೃಷಿಭೂಮಿಯಲ್ಲಿನ ಕಟ್ಟಡಗಳಿಗೆ ವಿಸ್ತೃತ ಗ್ರಾಮಠಾಣಾ ಪ್ರದೇಶ ಎಂದು ಘೋಷಿಸುವ ಉದ್ದೇಶಕ್ಕಾಗಿ ಒಂದು ಬಾರಿ ವಿನಾಯಿತಿ ನೀಡಿ ಸಕ್ರಮಗೊಳಿಸುವ ವಿಧೇಯಕ ಮಂಡಿಸಲು ಸರ್ಕಾರಕ್ಕೆ ನಿರ್ಬಂಧಗಳಿವೆಯೇ ; (ವಿವರ ನೀಡುವುದು)

(ಈ) ಸಾರ್ವತ್ರಿಕ, ಸಾಮಾಜಿಕ ನ್ಯಾಯ ದೃಷ್ಟಿಯಿಂದ ಕೃಷಿಭೂಮಿಯಲ್ಲಿ ನಿರ್ಮಾಣಗೊಂಡಿರುವ ಮನೆಗಳವರೆಗೂ ನಿಗದಿತ ಮಿತಿಯೊಳಗೆ ಕೃಷಿ ಭೂಮಿಯಲ್ಲಿನ ಅಘೋಷಿತ ಪಾರಂಪರಿಕ ವಿಸ್ತೃತ ಗ್ರಾಮತಾಣಾ ಕಟ್ಟಡಗಳಿಗೆ ವಿಸ್ತೃತ ಗ್ರಾಮತಾಣಾ ಪ್ರದೇಶ ಎಂದು ಶಾಸನ ರಚಿಸಿ ಗ್ರಾಮೀಣ ಜನತೆಗೆ ಅವಕಾಶ ಮಾಡಿಕೊಡಲು ಸರ್ಕಾರ ಬದ್ಧವಾಗಿದೆಯೇ ?

## ಪಶುಪಾಲನಾ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೯೯೧ (೬೭೯) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಪಾಲನಾ ಇಲಾಖೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಪಶುಪಾಲನಾ ಇಲಾಖೆಯಲ್ಲಿ ಪ್ರಭಾರ ವ್ಯವಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಎಷ್ಟು ; ಯಾವ ಯಾವ ವೃಂದಕ್ಕೆ ಸೇರಿದವರು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಲಿ ಮತ್ತು ಪ್ರಭಾರ ಹುದ್ದೆಗಳು ಹೆಚ್ಚಾಗಿರುವುದರಿಂದ ರೈತರ ಜಾನುವಾರುಗಳಿಗೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿರುವ ಎಲ್ಲಾ ತಾಲ್ಲೂಕಿನ ಪಶುಚಿಕಿತ್ಸಾಲಯ ಆಸ್ಪತ್ರೆಗಳಲ್ಲಿ ಸಹಾಯಕ ನಿರ್ದೇಶಕರಿಗೆ ಸಂಚಾರಿ ವಾಹನಗಳು ಇದೆಯೇ;

ಇಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ನೀಡಿರುವುದಿಲ್ಲ; ಇದ್ದಲ್ಲಿ ಯಾವ ವಿಧದ ಸಂಚಾರಿ ವಾಹನಗಳನ್ನು ಒದಗಿಸಲಾಗಿದೆ; ಇವುಗಳು ಉಪಯೋಗಿಸಲು ಯೋಗ್ಯವಾಗಿವೆಯೇ ?

## ಅಕಾಡೆಮಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೬೯೨ (೬೮೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿಗೆ ಇರುವ ಒಟ್ಟು ಅಕಾಡೆಮಿಗಳು ಎಷ್ಟು; ಅವುಗಳು ಯಾವುವು ;

(ಆ) ಈ ಅಕಾಡೆಮಿಗಳಿಗೆ ಕಳೆದ ಸಾಲಿನಿಂದ ಇಲ್ಲಿಯವರೆವಿಗೂ ಹಂಚಿಕೆ ಮಾಡಲಾದ ಅನುದಾನ ಎಷ್ಟು; ಇದರಲ್ಲಿ ಬಿಡುಗಡೆ ಮಾಡಿದ ಹಣ ಎಷ್ಟು;

(ಇ) ಯಾವ ಯಾವ ಅಕಾಡೆಮಿಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಈ) ೨೦೧೯–೨೦ನೇ ಸಾಲಿನ ಅಕಾಡೆಮಿಗಳಿಗೆ ನಿಗದಿಪಡಿಸಿರುವ ವಾರ್ಷಿಕ ಅನುದಾನ ಎಷ್ಟು;

(ಉ) ಲಾಕ್‌ಡೌನ್ ಅವಧಿಯಲ್ಲಿ ಒಟ್ಟು ಎಷ್ಟು ಕಲಾವಿದರಿಗೆ ಹಾಗೂ ಸಾಹಿತಿಗಳಿಗೆ ಸರ್ಕಾರ ರೂ. ೨೦೦೦ ದಂತೆ ಆರ್ಥಿಕ ನೆರವನ್ನು ನೀಡಿದೆ ; (ವಿವರವನ್ನು ನೀಡುವುದು)

(ಊ) ಈ ಹಣವನ್ನು ನೇರವಾಗಿ ನೀಡಲಾಗಿದೆಯೇ ಅಥವಾ ಅವರವರ ಬ್ಯಾಂಕ್ ಖಾತೆಗಳಿಗೆ ಆರ್‌ಟಿಜಿಎಸ್ ಮೂಲ ಜಮಾ ಮಾಡಲಾಗಿದೆಯೇ ;

(ಋ) ಈ ನೆರವು ನೀಡಲು ಯಾವ ಖಾತೆಯಲ್ಲಿದ್ದ ಹಣವನ್ನು ಬಳಸಿಕೊಳ್ಳಲಾಗಿದೆ ?

## ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕ ಕೊಠಡಿಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೯೩ (೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಬಸ್ ನಿಲ್ದಾಣಗಳಿವೆ ; (ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಕಡ್ಡಾಯವಾಗಿ ಮಹಿಳೆಯರಿಗೆ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಎಷ್ಟು ಬಸ್ ನಿಲ್ದಾಣಗಳಲ್ಲಿ ಮಹಿಳಾ ವಿಶ್ರಾಂತಿ ಗೃಹಗಳ ಕೊರತೆ ಇದೆ ; ಅವುಗಳನ್ನು ಯಾವಾಗ ನಿರ್ಮಿಸಲಾಗುವುದು ? (ವಿವರ ನೀಡುವುದು)

## ಪಶು ಆಸ್ಪತ್ರೆ ಮತ್ತು ವೈದ್ಯರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೯೪ (೬೮) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ ; ಇದರಲ್ಲಿ ಸ್ವಂತ ಕಟ್ಟಡಗಳಿಲ್ಲದ ಆಸ್ಪತ್ರೆಗಳು ಎಷ್ಟು ;

(ಆ) ಯಾವ ಕಾಲಮಿತಿಯಲ್ಲಿ ಈ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡವನ್ನು ಒದಗಿಸಲಾಗುವುದು ;

(ಇ) ಒಟ್ಟು ಮಂಜೂರಾದ ಪಶು ವೈದ್ಯರ ಹುದ್ದೆಗಳೆಷ್ಟು ;

(ಈ) ಖಾಲಿ ಹುದ್ದೆಗಳೆಷ್ಟು ; ಯಾವಾಗ ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಪಿ.ಡಿ.ಓ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೯೫ (೭೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿ.ಡಿ.ಓ ಹುದ್ದೆಯನ್ನು ಮೇಲ್ದರ್ಜೆ (ಗ್ರೂಪ್ ಬಿ)ಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಪ್ರಸ್ತಾವನೆಯನ್ನು ೬ನೇ ವೇತನ ಆಯೋಗದ ಮುಂದೆ ತರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೬ನೇ ವೇತನ ಆಯೋಗವು ತನ್ನ ೨ನೇ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಆ ವರದಿಯಲ್ಲಿ ಅಭಿಪ್ರಾಯಗಳೇನು ;

(ಈ) ಈ ಬಗ್ಗೆ ಸರ್ಕಾರದ ನಿಲುವೇನು ?

## ಪ್ರವಾಸೋದ್ಯಮ ಕ್ಷೇತ್ರಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೬ (೭೨೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಪ್ರವಾಸೋದ್ಯಮ ಸ್ಥಳಗಳ ಅಭಿವೃದ್ಧಿಯ ವಿಷಯಗಳಿಗೆ ಸಂಬಂಧಪಟ್ಟ ಎಷ್ಟು ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರದ ಅನುಮೋದನೆಗಾಗಿ ಕಳುಹಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ಈ ಪೈಕಿ ಎಷ್ಟು ಪ್ರಸ್ತಾವನೆಗಳಿಗೆ ಈ ಅವಧಿಯಲ್ಲಿ ಕೇಂದ್ರ ಸರ್ಕಾರವು ಅನುಮೋದನೆ ನೀಡಿದೆ ; ಇನ್ನೂ ಎಷ್ಟು ಪ್ರಸ್ತಾವನೆಗಳು ಕೇಂದ್ರ ಸರ್ಕಾರದ ಮುಂದೆ ಅನುಮೋದನೆಗಾಗಿ ಎಷ್ಟು ದಿನಗಳಿಂದ ಬಾಕಿ ಉಳಿದಿವೆ ;

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ನೆರವಿನೊಂದಿಗೆ ಯಾವ ಯಾವ ಪ್ರವಾಸೋದ್ಯಮ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ; ಈ ಅವಧಿಯಲ್ಲಿ ರಾಜ್ಯದ ಯಾವ ಯಾವ ಪ್ರವಾಸೋದ್ಯಮ ಸ್ಥಳಗಳಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ; (ಪೂರ್ಣ ವಿವರಗಳನ್ನು ಜಿಲ್ಲಾವಾರು ಅಂಕಿ ಅಂಶಗಳಲ್ಲಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಮೇಲ್ಕಂಡ ಯೋಜನೆಗಳ ಅನುಷ್ಠಾನ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಪ್ರತಿ ವರ್ಷ ಖರ್ಚು ಮಾಡಿದ ಹಣವೆಷ್ಟು ; ಈ ಪೈಕಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎಷ್ಟೆಷ್ಟು ಹಣವನ್ನು ವೆಚ್ಚ ಮಾಡಿರುತ್ತದೆ ; (ಪ್ರತಿ ಯೋಜನೆಗಳು ಮತ್ತು ಅಭಿವೃದ್ಧಿ ಕಾಮಗಾರಿಗಳಿಗಾಗಿ ವೆಚ್ಚ ಮಾಡಿದ ಹಣದ ಪೂರ್ಣ ಮಾಹಿತಿಯನ್ನು ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಉ) ಕಲಬುರಗಿ ಜಿಲ್ಲೆಗೆ ಯಾವುದಾದರೂ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಯನ್ನು ಇಲಾಖೆಯಿಂದ ಹಮ್ಮಿಕೊಳ್ಳಲಾಗಿದೆಯೇ ?

## ಕೇಂದ್ರದ ಅನುದಾನ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೭ (೭೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ರಿಂದ ೨೦೧೯–೨೦ನೇ ಸಾಲಿನಲ್ಲಿ ಸಾರಿಗೆ ವ್ಯವಸ್ಥೆಯು ಸುಧಾರಣೆಗಾಗಿ ಕೇಂದ್ರ ಸರ್ಕಾರದಿಂದ ಹಂಚಿಕೆಯಾಗಿರುವ ಅನುದಾನವೆಷ್ಟು; (ವರ್ಷವಾರು ಹಂಚಿಕೆ ಮಾಡಲಾಗಿರುವ ಅನುದಾನದ ಸಂಪೂರ್ಣ ವಿವರ ಒದಗಿಸುವುದು)

(ಆ) ಈ ಅನುದಾನದಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ಈ ಯೋಜನೆಗಳಿಗೆ ಖರ್ಚು ಮಾಡಿರುವ ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗಳ ಪೈಕಿ ಪೂರ್ಣಗೊಂಡಿರುವ ಹಾಗೂ ವಿಫಲಗೊಂಡಿರುವ ಯೋಜನೆಗಳೆಷ್ಟು; ಯೋಜನೆಗಳು ವಿಫಲಗೊಳ್ಳಲು ಕಾರಣವೇನು ?

## ಕಲಬುರಗಿ ಜಿಲ್ಲೆಯ ತಾಲ್ಲೂಕು ಪಂಚಾಯತಿಗಳಿಗೆ ಮಂಜೂರಾದ ಸಿಬ್ಬಂದಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೮ (೭೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ತಾಲ್ಲೂಕು ಪಂಚಾಯತ್‌ಗಳಲ್ಲಿ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಖಾಲಿಯಾಗಿರುವ ಹುದ್ದೆಗಳೆಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ತಾಲ್ಲೂಕು ಪಂಚಾಯತ್‌ಗಳಲ್ಲಿ ಖಾಯಂ ಸಿಬ್ಬಂದಿಯಿಲ್ಲದೆ ಗ್ರಾಮ ಪಂಚಾಯತಿಗಳಿಂದ ನಿಯೋಜನೆ ಮೇರೆಗೆ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಇದರಿಂದ ಗ್ರಾಮ ಪಂಚಾಯತ್‌ಗಳ ಅಭಿವೃದ್ಧಿಗೆ ತೊಂದರೆಯಾಗುವುದಿಲ್ಲವೇ; ಯಾವಾಗ ಖಾಯಂ ಸಿಬ್ಬಂದಿಯನ್ನು ನೇಮಿಸಲಾಗುವುದು ?

## ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಗೆ ನಿಗದಿಗೊಳಿಸಿದ ಮೊತ್ತದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೯ (೭೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ರಾಜ್ಯದಲ್ಲಿ ನಿಗದಿಪಡಿಸಿದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

(ಆ) ಈ ಯೋಜನೆಗೆ ಕಳೆದ ಮೂರು ವರ್ಷಗಳಲ್ಲಿ ವೆಚ್ಚ ಮಾಡಿರುವ ಮೊತ್ತವೆಷ್ಟು; (ಕಾಮಗಾರಿ ಮತ್ತು ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ಮತ್ತು ವೆಚ್ಚ ಮಾಡಿರುವ ಮೊತ್ತವೆಷ್ಟು; (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

(ಈ) ಹಾಗಿದ್ದಲ್ಲಿ, ಸದರಿ ಯೋಜನೆಯಡಿ ಇದುವರೆವಿಗೂ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಇವುಗಳಲ್ಲಿ ಪೂರ್ಣವಾಗಿರುವ ಮತ್ತು ಅಪೂರ್ಣವಾಗಿರುವ ಕಾಮಗಾರಿಗಳಾವುವು ? (ವಿಧಾನ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

## ಲಾಕ್‌ಡೌನ್ ಸಮಯದಲ್ಲಿ ವಲಸೆ ಕಾರ್ಮಿಕರ ಸ್ಥಿತಿಗತಿಯ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೦ (೭೧೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲಾಕ್‌ಡೌನ್ ಸಂದರ್ಭದಲ್ಲಿ ವಲಸೆ ಕಾರ್ಮಿಕರನ್ನು ಅವರ ಊರಿಗೆ ಕಳುಹಿಸಲು ಸರ್ಕಾರವು ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ;

(ಆ) ಸರ್ಕಾರವು ಉಚಿತ ಪ್ರಯಾಣಕ್ಕೆ ವ್ಯವಸ್ಥೆಯನ್ನು ಮಾಡಲಾಗಿತ್ತೇ ಅಥವಾ ನಿರ್ದಿಷ್ಟವಾದ ದರವನ್ನು ಏನಾದರೂ ನಿಗದಿ ಮಾಡಲಾಗಿದೆಯೇ ;

(ಇ) ದುಪ್ಪಟ್ಟು ದರ ನಿಗದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೧ (೭೧೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯ ಭರಚುಕ್ಕಿ ಜಲಪಾತ ಮತ್ತು ಮಂಡ್ಯ ಜಿಲ್ಲೆಯಲ್ಲಿರುವ ಗಗನಚುಕ್ಕಿ ಜಲಪಾತಗಳು ಪ್ರವಾಸಿಗರ ಆಕರ್ಷಣೀಯ ತಾಣಗಳಾಗಿ ಈ ತಾಣಗಳಿಗೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಭೇಟಿ ನೀಡುವುದರಿಂದ ಪ್ರವಾಸಿಗರ ಅನುಕೂಲಕ್ಕಾಗಿ ಹೆಚ್ಚುವರಿ ಪ್ರವಾಸಿ ಸೌಲಭ್ಯಗಳನ್ನು ರೂ.೫.೦೦ ಕೋಟಿ ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಿ ೨೦೧೮–೧೯ನೇ ಆಯವ್ಯಯದಲ್ಲಿ ಮಂಡಿಸಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಈ ಸೌಲಭ್ಯಗಳನ್ನು ಅನುಷ್ಠಾನಕ್ಕೆ ತರಲಾಗಿದೆಯೇ ;

(ಇ) ಈ ಸೌಲಭ್ಯ ಇದುವರೆಗೂ ಅನುಷ್ಠಾನಕ್ಕೆ ತರದೆ ಇದ್ದಲ್ಲಿ, ಯಾವಾಗ ಅನುಷ್ಠಾನಕ್ಕೆ ತರಲಾಗುವುದು ; ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

## ಜಾನುವಾರುಗಳಿಗೆ ಬರುವ ವಿವಿಧ ರೀತಿಯ ರೋಗಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೨ (೭೧೯) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾನುವಾರುಗಳು "ಚರ್ಮ ಗಂಟು ರೋಗ" ವೆಂಬ ರೋಗದಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಯಾವ ಜಿಲ್ಲೆಗಳಲ್ಲಿ ಈ ರೋಗವು ವ್ಯಾಪಿಸುತ್ತಿದೆ ;

(ಇ) ಈ ರೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಒಂದು ವೇಳೆ ಜಾನುವಾರುಗಳಿಗೆ ಸಾವು ಸಂಭವಿಸಿದರೆ ರೈತರಿಗೆ ನೀಡಬಹುದಾದ ಪರಿಹಾರ ಧನ ಎಷ್ಟು ? (ಮಾಹಿತಿ ನೀಡುವುದು)

## ಅಂಧ ತಾಯಂದಿರಿಗೆ ಮಾಸಿಕ ಶಿಶುಪಾಲನಾ ಭತ್ಯೆಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೩ (೭೨೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಅಂಧ ತಾಯಂದಿರಿಗೆ ಮಾಸಿಕ ೨೦೦೦ ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ಸರ್ಕಾರವು ಮಗುವಿನ ಮೊದಲ ಎರಡು ವರ್ಷದವರೆಗೆ ನೀಡುತ್ತಿದ್ದು, ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು ಘೋಷಿಸಿದ್ದು, ಇದು ಅನುಷ್ಠಾನದಲ್ಲಿದೆಯೇ ;

(ಆ) ಅನುಷ್ಠಾನಕ್ಕೆ ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ;

(ಇ) ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೪ (೬೮೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದ ಕಾಶ್ಮೀರವೆಂದೇ ಖ್ಯಾತಿ ಪಡೆದ ಕೊಡಗು ಜಿಲ್ಲೆಯಲ್ಲಿ ಪರಿಸರಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ರೂಪಿಸಿರುವ ಪ್ರವಾಸಿಸ್ನೇಹಿ ಯೋಜನೆಗಳೇನು ;

(ಆ) ಜಿಲ್ಲೆಯಲ್ಲಿ ಪರಿಸರಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಸರ್ಕಾರ ಕಳೆದ ೩ ವರ್ಷಗಳಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಹಾಗೂ ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ವಿವರಗಳೇನು ;

(ಇ) ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸಂಭವಿಸಿದ ಪ್ರವಾಹ ಹಾಗೂ ಭೂಕುಸಿತದ ಹಿನ್ನೆಲೆಯಲ್ಲಿ ಪರಿಸರಸ್ನೇಹಿ ಸುಸ್ಥಿರ ಹಾಗೂ ಪ್ರವಾಸಿಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ವಿವರಗಳನ್ನು ನೀಡುವುದು)

## ಕೊಡಗು ಜಿಲ್ಲೆಯ ಮಕ್ಕಂದೂರು–ತಂತಿಪಾಲ–ಮುಕ್ಕೋಡ್ಲು ಸಂಪರ್ಕ ರಸ್ತೆ ದುರಸ್ತಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೫ (೬೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕಿನ ಮಕ್ಕಂದೂರು– ತಂತಿಪಾಲ–ಮುಕ್ಕೋಡ್ಲು ಸಂಪರ್ಕ ರಸ್ತೆ ಸಂಪೂರ್ಣ ಹಾಳಾಗಿದ್ದು ಗ್ರಾಮಾಸ್ಥರು ಹಾಗೂ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೬–೧೭ ರಿಂದ ಇಲ್ಲಿಯವರೆಗೆ ಸದರಿ ರಸ್ತೆಯ ದುರಸ್ತಿ/ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಖರ್ಚು ಮಾಡಲಾಗಿದೆ ; (ವರ್ಷವಾರು ಹಾಗೂ ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲೇ ಸಂಪೂರ್ಣವಾಗಿ ಹಾಳಾಗಿರುವ ಸದರಿ ರಸ್ತೆಯನ್ನು ದುರಸ್ತಿ/ಅಭಿವೃದ್ಧಿಪಡಿಸಲಾಗುವುದೇ ?

## ಮಡಿಕೇರಿಯಲ್ಲಿ ನಿರ್ಮಾಣವಾಗುತ್ತಿರುವ ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೬ (೬೮೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಾಮಗಾರಿಯು ಅನುಮೋದನೆಗೊಂಡ ವರ್ಷ ಯಾವುದು ;

(ಇ) ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ವಿವರ ನೀಡುವುದು ;

(ಈ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಹಾಳಾಗಿರುವ ಗ್ರಾಮೀಣ ಭಾಗದ ರಸ್ತೆ, ಸೇತುವೆ ಮತ್ತು ತಡೆಗೋಡೆಗಳ ದುರಸ್ತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೭ (೬೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸುರಿದ ಧಾರಕಾರ ಮಳೆ ಹಾಗೂ ಭೂಕುಸಿತದಿಂದಾಗಿ, ಗ್ರಾಮೀಣ ಭಾಗದ ಹಲವಾರು ರಸ್ತೆ, ಸೇತುವೆ ಮತ್ತು ತಡೆಗೋಡೆಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಹಾನಿಗೀಡಾದ ರಸ್ತೆ, ಸೇತುವೆ ಹಾಗೂ ತಡೆಗೋಡೆಗಳು ಯಾವುವು ; ಅವುಗಳ ದುರಸ್ಥಿ ಅಥವಾ ಮರು ನಿರ್ಮಾಣ ಮಾಡಲಾಗಿದೆಯೇ ; (ವರ್ಷವಾರು ಹಾಗೂ ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ರೀತಿ ಹಾನಿಗೀಡಾದ ರಸ್ತೆ, ಸೇತುವೆ ಮತ್ತು ತಡೆಗೋಡೆಗಳ ದುರಸ್ಥಿ ಅಥವಾ ಮರು ನಿರ್ಮಾಣಕ್ಕೆ

ವಿನಿಯೋಗಿಸಿರುವ ಅನುದಾನವೆಷ್ಟು ; (ವರ್ಷವಾರು ಹಾಗೂ ಕಾಮಗಾರಿವಾರು ವಿವರಗಳನ್ನು ನೀಡುವುದು)

(ಈ) ಇದುವರೆಗೂ ದುರಸ್ಥಿ ಅಥವಾ ಮರು ನಿರ್ಮಾಣವಾಗದಿರುವ ರಸ್ತೆ ಸೇತುವೆ ಹಾಗೂ ತಡೆಗೋಡೆಗಳು ಯಾವುವು ; ಮತ್ತು ಇದಕ್ಕೆ ಕಾರಣಗಳೇನು ?

## ಮಡಿಕೇರಿಯಲ್ಲಿ ನಿರ್ಮಾಣವಾಗುತ್ತಿರುವ ಸುವರ್ಣ ಕನ್ನಡ ಸಮುಚ್ಛಯ ಭವನದ ಕಾಮಗಾರಿ ನೆನೆಗುದಿಗೆ ಬಿದ್ದಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೦೮ (೭೩೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಸುವರ್ಣ ಕನ್ನಡ ಸಮುಚ್ಛಯ ಭವನದ ಕಾಮಗಾರಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿ ಅನುಮೋದನೆಗೊಂಡ ವರ್ಷ ಯಾವುದು ;

(ಇ) ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ?

## ಗ್ರಾಮ ಪಂಚಾಯಿತಿಗಳ ಸಮಸ್ಯೆಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೦೯ (೭೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತಿಗಳ ಅಧಿಕಾರದ ಅವಧಿ ಮುಕ್ತಾಯವಾಗಿರುವ ಹಿನ್ನಲೆಯಲ್ಲಿ ಗ್ರಾಮಗಳ ಜನರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆಯೇ ; ಯಾವ ಯಾವ ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ;

(ಇ) ಗ್ರಾಮ ಪಂಚಾಯತಿಗಳಲ್ಲಿ ಆಡಳಿತಾಧಿಕಾರಿಗಳ ಪಾತ್ರವೇನು ; ಅವರಿಗೆ ವಹಿಸಿರುವ ಕಾರ್ಯನಿರ್ವಹಣೆ ಯಾವುದು ;

(ಈ) ಗ್ರಾಮ ಪಂಚಾಯತಿಗಳಿಗೆ ನಿಗಧಿತ ಅವಧಿಯೊಳಗೆ ಚುನಾವಣೆ ನಡೆಸಲಾಗುವುದೇ ; ಈ ದಿಶೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೦ (೭೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಗ್ರಾಮಗಳಿಗೆ ಕುಡಿಯುವ ನೀರನ್ನು ಯಾವ ಯಾವ ಮೂಲಗಳಿಂದ ಒದಗಿಸಲಾಗುತ್ತಿದೆ ;

(ಆ) ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅಡಿಯಲ್ಲಿ ಬೀದರ್ ಜಿಲ್ಲೆಯ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು ; ಅನುದಾನವು ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ;

(ಈ) ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಸುಮಾರು ಗ್ರಾಮಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೧ (೭೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಯಾವ ಯಾವ ಆಹಾರ ಧಾನ್ಯಗಳನ್ನು ಪೂರೈಸಲಾಗುತ್ತಿದೆ ;

(ಆ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಸಲಾಗುತ್ತಿದೆ ಎನ್ನುವ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಉತ್ತಮ ಗುಣಮಟ್ಟದ ಆಹಾರ ಸರಬರಾಜು ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯ ಜಿಲ್ಲಾ ಪಂಚಾಯತ್ ಸಂಕೀರ್ಣದ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೨ (೭೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಜಿಲ್ಲಾ ಪಂಚಾಯತ್ ಸಂಕೀರ್ಣ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾತಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಸಂಕೀರ್ಣ ನಿರ್ಮಾಣಕ್ಕೆ ಎಷ್ಟು ಅನುದಾನ ಮಂಜೂರಾಗಿದೆ ;

(ಆ) ಬೀದರ್ ಜಿಲ್ಲಾ ಪಂಚಾಯುತಿ ಸಂಕೀರ್ಣ ನಿರ್ಮಾಣ ಮಾಡಲಾಗಿದೆಯೇ ; ಸಂಕೀರ್ಣ ನಿರ್ಮಾಣಕ್ಕೆ ವಿಳಂಬವಾಗಿದ್ದಲ್ಲಿ ಕಾರಣಗಳೇನು ;

(ಇ) ಬೀದರ್ ಜಿಲ್ಲಾ ಪಂಚಾಯತಿ ಸಂಕೀರ್ಣಕ್ಕೆ ಬಿಡುಗಡೆಯಾದ ಅನುದಾನದ ಪೈಕಿ ಎಷ್ಟು ಖರ್ಚಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಯ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೩ (೭೬೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಯಾವ ಯಾವ ಪ್ರದೇಶಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕ್ರಮ ತೆಗೆದುಕೊಂಡಿದೆ ; (ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಮಂಜೂರು ಮಾಡಿರುವ ಅನುದಾನ ಎಷ್ಟು ; ಬಳಕೆಯಾಗಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಗಳಲ್ಲಿ ಲಾಕ್‌ಡೌನ್ ಅವಧಿಯಲ್ಲಿ ಮಳಿಗೆಗಳ ವ್ಯಾಪಾರವಿಲ್ಲದ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೭೧೪ (೭೪೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣಗಳಲ್ಲಿ ಮಳಿಗೆಗಳನ್ನು ಹೊಂದಿದ್ದವರು ಲಾಕ್ ಡೌನ್ ಅವಧಿಯಲ್ಲಿ ವ್ಯಾಪಾರವಿಲ್ಲದೆ ನಷ್ಟ ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಲಾಕ್ ಡೌನ್ ಅವಧಿಯ ಬಾಡಿಗೆಯನ್ನು ಮನ್ನಾ ಮಾಡುವ ಬಗ್ಗೆ ಸರ್ಕಾರ ನಿರ್ಣಯ ಕೈಗೊಂಡಿದೆಯೇ;

(ಇ) ಕೈಗೊಂಡಿದ್ದಲ್ಲಿ, ಎಷ್ಟು ತಿಂಗಳ ಅವಧಿಗೆ ಬಾಡಿಗೆ ಮನ್ನಾ ಮಾಡಲು ಉದ್ದೇಶಿಸಿದೆ ?

## ರಾಜ್ಯದ ಪ್ರವಾಸಿ ತಾಣಗಳ ನಿರ್ವಹಣೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೭೧೫ (೬೭೧) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಸಿದ್ಧ ಪ್ರವಾಸೋದ್ಯಮ ಸ್ಥಳಗಳ ನಿರ್ವಹಣೆಗಾಗಿ ಸರ್ಕಾರ ಒದಗಿಸುತ್ತಿರುವ ಅನುದಾನವೆಷ್ಟು ;

(ಆ) ಪ್ರವಾಸ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಉತ್ತಮ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಯುವಕರಲ್ಲಿ ಕ್ರೀಡಾ ಮನೋಭಾವವನ್ನು ಹೆಚ್ಚಿಸುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೭೧೬ (೬೬೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರದ ಯುವಕರಲ್ಲಿ ಕ್ರೀಡಾ ಮನೋಭಾವವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ರೀಡಾ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳಾವುವು ;

(ಆ) ಯಾವ ಯಾವ ಕ್ರೀಡೆಗಳಿಗೆ ತರಬೇತುದಾರರ ಮೂಲಕ ತರಬೇತಿ ನೀಡಲಾಗುತ್ತಿದೆ ; ತರಬೇತಿ ಸ್ಥಳಗಳಾವುವು ;

(ಇ) ಯಾವ ಯಾವ ಕ್ರೀಡೆಗಳಿಗೆ ತರಬೇತಿ ಹೊಂದಲು ಯಾವ ಅರ್ಹತೆಗಳನ್ನು ನಿಗದಿಪಡಿಸಲಾಗಿದೆ ?

## ಜಾಬ್ ಕಾರ್ಡ್‌ಗಳನ್ನು ನೀಡಲು ವಿಳಂಬ ಮಾಡುತ್ತಿರುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೭೧೭ (೬೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಹಿನ್ನೆಲೆಯಲ್ಲಿ ನಗರ ಪ್ರದೇಶದಿಂದ ಗ್ರಾಮೀಣ ಭಾಗಕ್ಕೆ ಹಿಂದಿರುಗಿದ ವಲಸೆ ಕಾರ್ಮಿಕರಿಗೆ ಸ್ಥಳೀಯವಾಗಿ ಉದ್ಯೋಗಾವಕಾಶ ಒದಗಿಸಿಕೊಡುವ ನಿಟ್ಟಿನಲ್ಲಿ ಸರ್ಕಾರ ಜಾಬ್ ಕಾರ್ಡ್ ವಿತರಿಸಿದೆಯೇ ;

(ಆ) ವಿತರಿಸಿದ್ದಲ್ಲಿ, ಎಷ್ಟು ಜನರಿಗೆ ಜಾಬ್‌ಕಾರ್ಡ್‌ಗಳನ್ನು ವಿತರಿಸಿ, ಉದ್ಯೋಗಗಳನ್ನು ಕಲ್ಪಿಸಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೋವಿಡ್ ಸಾಂಕ್ರಾಮಿಕ ರೋಗ ಇನ್ನೂ ಪೂರ್ಣ ಪ್ರಮಾಣದಲ್ಲಿ ನಿಯಂತ್ರಣಕ್ಕೆ ಬಂದಿಲ್ಲದಿದ್ದರೂ ಜಾಬ್‌ಕಾರ್ಡ್ ನೀಡುವುದನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮಹಿಳೆಯರ ಆರ್ಥಿಕ ಸಬಲೀಕರಣ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೭೧೮ (೬೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಮಹಿಳೆಯರ ಆರ್ಥಿಕ ಸಬಲೀಕರಣ ಸಲುವಾಗಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮಕ್ಕೆ ಸರ್ಕಾರ ಒದಗಿಸುತ್ತಿರುವ ಅನುದಾನವೆಷ್ಟು ;

(ಆ) ಸದರಿ ಅನುದಾನದ ಮೂಲಕ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ;

(ಇ) ಯಾವ ಯೋಜನೆಗಳು ಹೆಚ್ಚು ಸಫಲತೆಯನ್ನು ಹೊಂದಿವೆ ಮತ್ತು ಯಾವ ಯೋಜನೆಗಳು ನಿಷ್ಕ್ರಿಯಗೊಂಡಿವೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಆರ್ಥಿಕ ಸ್ವಾವಲಂಬನೆಯನ್ನು ಹೊಂದಿರುವಂತ ಮಹಿಳೆಯರ ಸಂಖ್ಯೆ ಮತ್ತು ಯೋಜನೆಗಳ ವಿವರಗಳೇನು ? (ಜಾತಿವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

## ಕ್ರೀಡಾ ವಸತಿ ಶಾಲೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೭೯ (೭೮೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕ್ರೀಡಾ ಇಲಾಖೆಯಿಂದ ನಡೆಯುತ್ತಿರುವ ಕ್ರೀಡಾ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಶಾಲೆಗಳಿಗೆ ಮಂಜೂರಾಗಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಖಾಯಂಗೊಂಡ ಹಾಗೂ ಗುತ್ತಿಗೆ/ಅತಿಥಿ ನೌಕರರಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು ? (ಪ್ರಾಂಶುಪಾಲರು ಮತ್ತು ಶಿಕ್ಷಕರ ಪ್ರತ್ಯೇಕವಾಗಿ ವಿವರ ನೀಡುವುದು)

## ವಿಕಲಚೇತನರಿಗೆ ನೀಡುವ ಸೌಲಭ್ಯಗಳು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೨೦ (೭೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಕಲಚೇತನರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳಾವುವು ; (ವಿವರ ನೀಡುವುದು)

(ಆ) ಅರ್ಹ ಫಲಾನುಭವಿಗಳನ್ನು ಗುರುತಿಸಿ, ಸೌಲಭ್ಯ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ? (ವಿವರ ಒದಗಿಸುವುದು)

## ಕಲಾವಿದರಿಗೆ ಪ್ರೋತ್ಸಾಹಧನದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೨೧ (೭೮೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾತಂಡಗಳನ್ನು ಮತ್ತು ಕಲಾವಿದರನ್ನು ಗುರುತಿಸಿ, ಅವರುಗಳನ್ನು ಪ್ರೋತ್ಸಾಯಿಸುವ ಕಾರ್ಯಗಳು ಸರ್ಕಾರದ ಮಟ್ಟದಲ್ಲಿ ನಡೆಯುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಇನ್ನೂ ಬೆಳಕಿಗೆ ಬಾರದ ಹಲವಾರು ಪ್ರತಿಭಾ ಕಲಾ ತಂಡಗಳೂ ಅವಕಾಶ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕಲಾವಿದರನ್ನು ಪ್ರೋತ್ಸಾಯಿಸಿ ಅವರುಗಳನ್ನು ಮುಖ್ಯ ವೇದಿಕೆಗೆ ಕರೆತರುವ ಜವಾಬ್ದಾರಿಯನ್ನು ಇಲಾಖಾಧಿಕಾರಿಗಳು ಮಾಡುವಲ್ಲಿ ಸಫಲರಾಗಿದ್ದಾರೆಯೇ ; ಹಾಗಿದ್ದಲ್ಲಿ, ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾವಿದರುಗಳು ಅವಕಾಶ ವಂಚಿತರಾಗಿದ್ದು ಏತಕ್ಕಾಗಿ;

(ಈ) ಇವರಗಳನ್ನು ಬೆಳೆಸುವಂತ ಹಾಗೂ ಪ್ರೋತ್ಸಾಹಿಸುವ ಸಲುವಾಗಿ ಅವರಿಗೆ ಭವಿಷ್ಯಕ್ಕೆ ಅನುಗುಣವಾಗಿ ಭದ್ರತೆಯನ್ನು ನೀಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ರೀತಿಯ ಭದ್ರತೆಯನ್ನು ನೀಡಲಾಗಿದೆ ; ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಉ) ಇಲಾಖೆಯ ವತಿಯಿಂದ ನಡೆದ ಕಾರ್ಯಕ್ರಗಳು ಆಯಾ ಜಿಲ್ಲೆಗಳಲ್ಲಿ ಸೂಕ್ತವಾದ ಸಮಯದಲ್ಲಿ ಜರುಗಲಿದೆಯೇ ; ಹಾಗಿದ್ದಲ್ಲಿ, ಇನ್ನೂ ಅನೇಕ ಭಾಗಗಳಲ್ಲಿ ಇಲಾಖಾ ವತಿಯಿಂದ ಕೈಗೊಳ್ಳುವ ಕಾರ್ಯಕ್ರಮಗಳು, ಯೋಜನೆಗಳು ಜನಸಾಮಾನ್ಯರನ್ನು ಮುಟ್ಟಿವೆಯೇ ; ಮುಟ್ಟಿಸುವಲ್ಲಿ ಸರ್ಕಾರವು ಕೈಗೊಂಡ ದಿಟ್ಟ ನಿರ್ಧಾರಗಳೇನು ?

## ಹೋಂ ಸ್ಟೇ ಮತ್ತು ರೆಸಾರ್ಟ್

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೨೨ (೭೭೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳನ್ನು ಪ್ರಾರಂಭಿಸಲು ಇರುವ ನಿಯಮಗಳೇನು ; (ಆದೇಶಗಳನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಅಕ್ರಮವಾಗಿ ನಡೆಸುತ್ತಿರುವ "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳು ಎಷ್ಟು ಹಾಗೂ ಸರ್ಕಾರ ಅವುಗಳ ವಿರುದ್ಧ ಕೈಗೊಂಡಿರುವ ಕ್ರಮ ಏನು ;

(ಈ) "ಹೋಂ ಸ್ಟೇ" ಹಾಗೂ ರೆಸಾರ್ಟ್‌ಗಳಿಗೆ ಸಂಪರ್ಕ ಕಲ್ಪಿಸಲು ಅಕ್ರಮವಾಗಿ ಸಂರಕ್ಷಿತ ಅರಣ್ಯಗಳಲ್ಲಿ ರಸ್ತೆಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಕ್ರೀಡಾ ವಸತಿ ಶಾಲೆಗಳ ಅಭಿವೃದ್ಧಿ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೨೩ (೭೭೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕ್ರೀಡಾ ವಸತಿ ಶಾಲೆಗಳಿಗೆ ನೀಡಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಕ್ರೀಡಾ ವಸತಿ ಶಾಲೆಗಳಿಗೆ ಯಾವ ಮಾನದಂಡ/ನಿಯಮಗಳ ಮೇಲೆ ಕ್ರೀಡಾಪಟುಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ ; (ವಿವರ ನೀಡುವುದು)

(ಇ) ರಾಜ್ಯದ ಎಲ್ಲಾ ಕ್ರೀಡಾ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ ; ಕೊರತೆ ಇದ್ದಲ್ಲಿ ಸರ್ಕಾರದಿಂದ ಏನು ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಎಲ್ಲಾ ಆಟಗಳಿಗೆ ತರಬೇತಿದಾರರನ್ನು ನೇಮಿಸಲಾಗಿದೆಯೇ ; ಖಾಯಂ/ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಆರ್.ಟಿ.ಓ ಕಛೇರಿಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೨೪ (೭೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿರುವ ಆರ್.ಟಿ.ಓ. ಕಛೇರಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಛೇರಿಗಳಿಗೆ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದಗಳವಾರು ವಿವರಗಳನ್ನು ನೀಡುವುದು)

(ಇ) ಈ ಕಛೇರಿಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದಗಳವಾರು ವಿವರಗಳನ್ನು ನೀಡುವುದು)

(ಈ) ಈ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಉ) ಈ ಹೊರಗುತ್ತಿಗೆ ನೌಕರರುಗಳಿಗೆ ನೀಡುತ್ತಿರುವ ಮಾಹೆಯಾನ ವೇತನದ ಪ್ರಮಾಣವೆಷ್ಟು ; ಈ ವೇತನವನ್ನು ಯಾವ ಮೂಲದಿಂದ ಪಾವತಿಸಲಾಗುತ್ತದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಬಾಲ್ಯ ವಿವಾಹ ತಡೆಗಟ್ಟುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೫ (೭೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಲ್ಯ ವಿವಾಹಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಲಾಕ್‌ಡೌನ್ ಅವಧಿಯಲ್ಲಿ ೨೦೨೦ರ ಮಾರ್ಚ್‌ನಿಂದ ಎಷ್ಟು ಬಾಲ್ಯ ವಿವಾಹಗಳು ನಡೆದಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಸಂಬಂಧ ಎಷ್ಟು ದೂರುಗಳು ದಾಖಲಾಗಿವೆ ; ಎಷ್ಟು ಪ್ರಕರಣಗಳು ಇತ್ಯರ್ಥವಾಗಿರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರಗಳ ಪ್ರತ್ಯೇಕ ಕಟ್ಟಡ ನಿರ್ಮಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೬ (೮೨೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರದ ಪ್ರತ್ಯೇಕ ಕಟ್ಟಡಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಆ) ಈ ಅಧ್ಯಯನ ಕೇಂದ್ರ ನಿರ್ಮಿಸಲು ಗುರುತಿಸಿರುವ ಸ್ಥಳ ಯೋಜನೆಯ ವೆಚ್ಚ, ನಿಗದಿಪಡಿಸಲಾಗಿರುವ ಗಡವು ಏನು ? (ಪೂರ್ಣ ವಿವರಗಳನ್ನು ನೀಡುವುದು)

## ವಿಶ್ವ ವಿಖ್ಯಾತ ಜೋಗ ಜಲಪಾತವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೭ (೮೨೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವ ವಿಖ್ಯಾತ ಜೋಗ ಜಲಪಾತವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಆ) ವಿಶ್ವ ವಿಖ್ಯಾತ ಜೋಗ ಜಲಪಾತವನ್ನು ಪ್ರವಾಸಿ ತಾಣವಾಗಿ ಮಾಡಲು ಕೈಗೊಂಡ ಯೋಜನೆ, ಅದಕ್ಕೆ ತಗಲುವ ವೆಚ್ಚ ಹಾಗೂ ಕಲ್ಪಿಸಲಿರುವ ಸೌಲಭ್ಯಗಳಾವುವು ? (ಪೂರ್ಣ ವಿವರವನ್ನು ಒದಗಿಸುವುದು)

## ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ನೀಡಿರುವ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೮ (೮೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ನೀಡುವ ಕ್ರಮ ಜಾರಿಯಲ್ಲಿದೆಯೇ ;

(ಆ) ಕೋವಿಡ್ ಪರಿಸ್ಥಿತಿ ಆರಂಭವಾದ ೨೦೨೦ರ ಮಾರ್ಚ್ ಮಾಹೆಯಿಂದ ೨೦೨೦ರ ಜುಲೈ ಮಾಹೆಯವರೆಗೆ ಈ ಯೋಜನೆಯಡಿ ಉದ್ಯೋಗ ಪಡೆದವರ ವಿವರ ಹಾಗೂ ಒಟ್ಟು ನಡೆದ ಕಾಮಗಾರಿಗಳು ಹಾಗೂ ಅದರ ವೆಚ್ಚದ ಪೂರ್ಣ ವಿವರವನ್ನು ಒದಗಿಸುವುದು ?

## ಹಂದಿ ಮತ್ತು ಕೋಳಿ ಜ್ವರ ನಿಯಂತ್ರಣದ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೯ (೭೧೧) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಂದಿ ಹಾಗೂ ಕೋಳಿ ಜ್ವರ ಬಂದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಂದಿ ಮತ್ತು ಕೋಳಿ ಜ್ವರದ ನಿಯಂತ್ರಣಕ್ಕೆ ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೈನುಗಾರಿಕೆ ಉತ್ತೇಜಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೦ (೬೮೫) ಮಾನ್ಯ ಪಶುಸಂಗೋಪನೆ ಮತ್ತು ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ, ಯಾದಗಿರಿ ಜಿಲ್ಲೆಗಳಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡಲು ಸರ್ಕಾರ ಮುಂದಾಗವುದೇ ;

(ಆ) ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಮಗ್ರ ಮಾಹಿತಿ ನೀಡುವುದು)

(ಇ) ಈ ಎರಡು ಜಿಲ್ಲೆಗಳಲ್ಲಿ ಹಾಲಿನ ಬೇಡಿಕೆ ಎಷ್ಟು; ಈಗ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಾಲಿನ ಕೊರತೆಯಾಗುತ್ತಿದ್ದಲ್ಲಿ ಪರ್ಯಾಯ ಮಾರ್ಗಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೧ (೬೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದಲ್ಲಿ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸಲು ಗುರುತಿಸಲಾಗಿದೆ ; (ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ನಿಗಧಿ ಮಾಡಿರುವ ಮಾನದಂಡಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಾಕಿ ಇರುವ ತೆರಿಗೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೨ (೬೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬರುವ ಗ್ರಾಮ ಪಂಚಾಯತ್‌ಗಳಿಂದ ಡಿಮ್ಯಾಂಡ್ ಪುಸ್ತಕದನ್ವಯ ಇಲ್ಲಿಯವರೆವಿಗೆ ವಸೂಲಿಯಾಗದೆ ಬಾಕಿ ಇರುವ ತೆರಿಗೆಯ ಮೊತ್ತ ಎಷ್ಟು ;

(ಆ) ಸರ್ಕಾರ ಯಾವ ಮಾನದಂಡದ ಆಧಾರದ ಮೇಲೆ ತೆರಿಗೆ ಪಾವತಿಯ ದರವನ್ನು ನಿಗಧಿಪಡಿಸುತ್ತದೆ ;

(ಇ) ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಏಕರೂಪ ತೆರಿಗೆ ದರ ಇದೆಯೇ ; ಇದ್ದಲ್ಲಿ, ವರ್ಗಾವಾರು ತೆರಿಗೆಯ ವಿವರಗಳೇನು ?

## ಬಿದಾಯಿ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೩ (೬೬೨) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಬಿದಾಯಿ ಯೋಜನೆಯ ಅನ್ವಯ ಎಷ್ಟು ಕುಟುಂಬಗಳಿಗೆ ಅನುದಾನ ನೀಡಲಾಗಿದೆ ;

(ಆ) ಬಿದಾಯಿ ಯೋಜನೆಯ ಫಲಾನುಭವಿಯಾಗಲು ಇರುವ ನಿಬಂಧನೆಗಳೇನು ;

(ಇ) ಬಿದಾಯಿ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳಿಗೆ ಅನುದಾನ ನೀಡಿರುವ ಕಾರಣ ರೂ.೩೩೦ ಕೋಟಿಗೂ ಹೆಚ್ಚು ಮೊತ್ತದ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಈ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಬಿದಾಯಿ ಯೋಜನೆಯ ಫಲಾನುಭವಿಯಾಗಲು ಹೊಂದಿರಬೇಕಾದ ಕನಿಷ್ಠ ವಯೋಮಿತಿ ಎಷ್ಟು; ಕನಿಷ್ಠ ವಯಸ್ಸಿಗಿಂತ ಕಡಿಮೆ ವಯಸ್ಸಿನ ವಧುಗಳಿಗೆ ಬಿದಾಯಿ ಯೋಜನೆಯಲ್ಲಿ ಅನುದಾನ ಬಿಡುಗಡೆ ಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ನಿಯಮಗಳಿಗೆ ವಿರುದ್ಧವಾಗಿ ನೀಡಿರುವ ಅನುದಾನವನ್ನು ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಹಿರಿಯ ನಾಗರಿಕರಿಗೆ ದೊರಯುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೪ (೬೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಿಯ ನಾಗರಿಕರಿಗೆ ರಾಜ್ಯ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು; ಹಿರಿಯ ನಾಗರಿಕರು ಆರ್ಥಿಕವಾಗಿ ಸಬಲರಾಗಿರುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಅನೇಕ ಹಿರಿಯ ನಾಗರಿಕರು ವಯೋಸಹಜ ಅನಾರೋಗ್ಯದಿಂದ ನರಳುತ್ತಿರುವುದರಿಂದ ಅವರ ಆರೋಗ್ಯ ರಕ್ಷಣೆಗೆ ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ;

(ಇ) ತಮ್ಮ ಮಕ್ಕಳಿಂದ ಪರಿತ್ಯಕ್ತ ಹಿರಿಯ ನಾಗರಿಕರು ಆಸ್ಪತ್ರೆಗೆ ತೆರಳಲೂ ಅಸಮರ್ಥರಿರುವ ಸಂದರ್ಭದಲ್ಲಿ ಅವರ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು; ಅಲ್ಲಿ ಪ್ರಸ್ತುತ ಎಷ್ಟು ವೃದ್ಧರಿಗೆ ಆಶ್ರಯ ನೀಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ದಾವಣಗೆರೆ ಜಿಲ್ಲೆಯ ನೀರು ಸರಬರಾಜು ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೫ (೬೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯ ನೀರು ಸರಬರಾಜು ಯೋಜನೆಯಲ್ಲಿ ರೂ. ೪೭.೫೫ ಕೋಟಿ ರೂಗಳ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅವ್ಯವಹಾರದಲ್ಲಿ ಭಾಗಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ದಾವಣಗೆರೆ ಜಿಲ್ಲೆಯ ಹಿಂದುಳಿದ ಬರಗಾಲ ಪೀಡಿತ ಜನರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸಲು ವಿಫಲವಾಗಿರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕೈಗೊಂಡ ಕ್ರಮಗಳೇನು ಸರ್ಕಾರದ ಹಣವನ್ನು ಪೋಲು ಮಾಡಿರುವ ಅಧಿಕಾರಿಯನ್ನು ಅಮಾನತ್ತು ಮಾಡಿ ಯಾವಾಗ ವಿಚಾರಣೆ ನಡೆಸಲಾಗುವುದು ;

(ಇ) ರಾಜ್ಯದ ತೆರಿಗೆಯ ಹಣವನ್ನು ಪೋಲು ಮಾಡಿರುವ ದಾವಣಗೆರೆ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಿ ನಿಷ್ಫಲ ವೆಚ್ಚವಾದ ಸಂಪೂರ್ಣ ಮೊತ್ತವನ್ನು ಅವರಿಂದ ವಸೂಲಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ; ಇಲ್ಲವಾದಲ್ಲಿ, ಎಂದು ಕ್ರಮ ಕೈಗೊಳ್ಳಲಾಗುವುದು ?

## ದೇವದಾಸಿ ಪುನರ್ವಸತಿ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೬ (೬೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೇವದಾಸಿ ಪುನರ್ವಸತಿ ಯೋಜನೆಯ ಅನ್ವಯ ಕೈಗೊಂಡ ಕಾರ್ಯಕ್ರಮಗಳೇನು; ಕಳೆದ ೫ ವರ್ಷಗಳಲ್ಲಿ ಎಷ್ಟು ದೇವದಾಸಿಯರಿಗೆ ಪುರ್ನವಸತಿ ಕಲ್ಪಿಸಲಾಗಿದೆ; ದೇವದಾಸಿಯರ ಜೀವನೋಪಾಯಕ್ಕೆ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿರುವ ಮಾಜಿ ದೇವದಾಸಿಯರ ಸಂಖ್ಯೆ ಎಷ್ಟು; ದೇವದಾಸಿ ಪದ್ಧತಿಯನ್ನು ನಿರ್ಮೂಲನೆಗೊಳಿಸಲು ಕೈಗೊಂಡ ಕ್ರಮಗಳೇನು ;

(ಇ) ಮಾಜಿ ದೇವದಾಸಿಯರಿಗೆ ವಸತಿ ಯೋಜನೆಯ ಅನ್ವಯ ಇದುವರೆಗೆ ಎಷ್ಟು ಮನೆಗಳನ್ನು ವಿತರಿಸಲಾಗಿದೆ; ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಾಜಿ ದೇವದಾಸಿಯರಿಗೆ ಕನಿಷ್ಠ ರೂ.೫೦೦೦/– ಮಾಸಶನ ನೀಡುವ ಕುರಿತು ಸರ್ಕಾರದ ನಿಲುವೇನು ?

## ಕನ್ನಡ ರಾಜ್ಯೋತ್ಸವದ ವೈಭವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೭ (೬೬೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಕಳೆದ ೫ ವರ್ಷಗಳಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ಕನ್ನಡ ರಾಜ್ಯೋತ್ಸವ ಆಚರಿಸುವ ಸಲುವಾಗಿ ಅನುದಾನ ಬಿಡುಗಡೆ ಮಾಡಲಾಗಿದೆ ; (ಸಂಘ ಸಂಸ್ಥೆಯ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಿದ ಬಳಿಕ ಸರ್ಕಾರವು ನೀಡಿರುವ ಅನುದಾನವನ್ನು ಯಾವ ರೀತಿಯಾಗಿ ವೆಚ್ಚ ಮಾಡಲಾಗಿದೆ ಎಂಬ ಬಗ್ಗೆ ಎಷ್ಟು ಸಂಘ ಸಂಸ್ಥೆಗಳು ಪಾಲನಾ ವರದಿ ನೀಡಿವೆ; (ಪಾಲನಾ ವರದಿ ಸಲ್ಲಿಸದ ಸಂಘ ಸಂಸ್ಥೆಗಳ ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಪಾಲನಾ ವರದಿ ಸಲ್ಲಿಸದಿರುವ ಎಷ್ಟು ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ; ಪಾಲನಾ ವರದಿ ಸಲ್ಲಿಸದಿರುವ ಸಂಘ ಸಂಸ್ಥೆಗಳಿಗೆ ನೀಡಿರುವ ಅನುದಾನ ಹಿಂಪಡೆಯಲು ಕೈಗೊಂಡ ಕ್ರಮಗಳೇನು ?

## ಮೈಸೂರಿನಿಂದ ಸಂತೇಮರಹಳ್ಳಿ ಮೂಲಕ ಚಾಮರಾಜನಗರಕ್ಕೆ ಹೆಚ್ಚಿನ ಸಾರಿಗೆ ಬಸ್ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೮ (೮೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಿಂದ ತಿ. ನರಸೀಪುರ, ಮೂಗೂರು, ಸಂತೇಮರಹಳ್ಳಿ ಮೂಲ ಚಾಮರಾಜನಗರಕ್ಕೆ ಹೆಚ್ಚಿನ ಸಾರಿಗೆ ಬಸ್ ಸೌಲಭ್ಯ ಇಲ್ಲದೆ ಸಾರ್ವಜನಿಕರು, ವಿದ್ಯಾರ್ಥಿಗಳು, ಸರ್ಕಾರಿ ನೌಕರರುಗಳಿಗೆ ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈಗ ಹೆಚ್ಚಿನ ಸಾರಿಗೆ ಸಂಸ್ಥೆ ಬಸ್‌ಗಳು, ಮೈಸೂರು ನಂಜನಗೂಡು ಮೂಲಕ ಚಾಮರಾಜನಗರಕ್ಕೆ ಸಂಚರಿಸುತ್ತಿದ್ದು, ಸಂತೇಮರಹಳ್ಳಿ ಮೂಲಕವೂ ಹೆಚ್ಚಿನ ಸಾರಿಗೆ ಸಂಸ್ಥೆ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಅದರಲ್ಲೂ ಮುಖ್ಯವಾಗಿ ಬೆಳಗ್ಗೆ ಹಾಗೂ ಸಂಜೆ ವೇಳೆ ಈ ಮಾರ್ಗದಲ್ಲಿ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಲಾಗುವುದೇ ?

## ನಂಜನಗೂಡು ನೂತನ ಬಸ್ ನಿಲ್ದಾಣಕ್ಕೆ ಬಸ್‌ಗಳು ಹೋಗದೇ ಇರುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೯ (೮೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಿಂದ ನಂಜನಗೂಡಿಗೆ ಮತ್ತು ನಂಜನಗೂಡು ಮೂಲಕ ಚಾಮರಾಜನಗರ. ಗುಂಡ್ಲುಪೇಟೆ ಕಡೆಗೆ ಸಂಚರಿಸುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ನಂಜನಗೂಡಿನಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣಕ್ಕೆ ಹೋಗಿ ನಿಲುಗಡೆ ಮಾಡದೆ. ಹಳೆಯ ಬಸ್ ನಿಲ್ದಾಣದಲ್ಲೇ ನಿಲುಗಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನೂತನ ಬಸ್ ನಿಲ್ದಾಣವು ರೈಲ್ವೆ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ದೇವಾಲಯಗಳಿಗೆ ಸಮೀಪದಲ್ಲಿದ್ದರೂ ಬಸ್‌ಗಳು ಇಲ್ಲಿಗೆ ಹೋಗದಿರಲು ಕಾರಣಗಳೇನು ;

(ಆ) ನೂತನ ಬಸ್ ನಿಲ್ದಾಣದಲ್ಲೇ ಬಸ್‌ಗಳನ್ನು ನಿಲುಗಡೆ ನೀಡುವಂತೆ ರಾಜ್ಯ ರಸ್ತೆ ಸಾರಿಗೆ ಬಸ್ ವಾಹನ ಚಾಲಕರಿಗೆ, ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಲಾಗುವುದೇ ;

(ಇ) ನೂತನ ಬಸ್ ನಿಲ್ದಾಣದಲ್ಲಿ ಇನ್ನೂ ಕೆಲವು ಕಾಮಗಾರಿಗಳು ನಡೆಯುತ್ತಿವೆಯೇ ; ಈ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಿ, ನಿಲ್ದಾಣವನ್ನು ಸುಸಜ್ಜಿತಗೊಳಿಸಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 050/450 ಪ್ರತಿಗಳು/21–09–2020